AM ಸಂಪುಟ: 11 | ಸಂಚಿಕೆ: 145| ಪುಟ : 02 | ಮೇ.31, 2024 | RNI No:KARKAN/2013/48989 | NO. MAG/1023/2020-21 | ದರ: 1.50 ರೂ. | aksharamitrahassan@gmail.com

ANNIVERSARY CELEBRATIONS 11th 2013-2023

ಓದುಗರ ಸ್ನೇಹಿತ...!

ಅಕ್ಷರ ಮಿತ್ರ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕ : ಸುನೀಲ್ ಕುಮಾರ್ ಕೆ.ಎಸ್
ಸಂಪಾದಕ : ನವೀನ್ ಆರ್.
ವ್ಯವಸ್ಥಾಪಕ ಸಂಪಾದಕ : ರವಿಕಿರಣ್ ಸಿ.ಎ.
ವಿಳಾಸ: ಅಕ್ಷರ ಮಿತ್ರ ಕನ್ನಡ ದಿನಪತ್ರಿಕೆ ದುರ್ಗಾ ಸದನ, 2ನೇ ಮಹಡಿ, ಕರೀಗೌಡ ಬಡಾವಣೆ, ಹಾಸನ-573201
9972776789

BRIGHT ACADEMY (R)
ಬ್ರೈಟ್ ಅಬ್ಯಾಕಸ್
ಬೇಸಿಗೆ ಶಿಬಿರ-2024
ಮಕ್ಕಳ ಮನೋವಿಕಾಸ ಹಾಗೂ ಬುದ್ಧಿ ಚಾತುರ್ಯತೆಯ ಗುಣಮಟ್ಟವನ್ನು ಹೆಚ್ಚಿಸುವ ತರಬೇತಿ ಸಂಸ್ಥೆ
Summer Camps 2023
ದಾಖಲಾತಿಗಾಗಿ ಕರೆಮಾಡಿ
7483029232
9880082368
9972776789



ಸಂಕ್ಷಿಪ್ತ ಸುದ್ದಿಗಳು

ಪಾಲಿಟೆಕ್ನಿಕ್ ಕೋರ್ಸ್‌ಗಳಿಗೆ ಆಫ್‌ಲೈನ್ ಪ್ರವೇಶ

ಹಾಸನ: ಸರ್ಕಾರಿ ಸಂಸ್ಥೆಯಾದ ಶ್ರೀಮತಿ ಎಲ್ ವಿ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಸಿವಿಲ್, ಕಂಪ್ಯೂಟರ್ ಸಯನ್ಸ್, ವಿದ್ಯುತ್, ಮೆಕ್ಯಾನಿಕಲ್, ಆಟೋಮೊಬೈಲ್ ಹಾಗೂ ವಿಭಾಗಗಳ ಖಾಲಿ ಉಳಿದಿರುವ ಸೀಟುಗಳಿಗೆ ಪ್ರಥಮ ವರ್ಷದ ಡಿಪ್ಲೊಮಾ ಆಫ್‌ಲೈನ್ ಮುಖಾಂತರ ಮೆರಿಟ್ ಆಧಾರಿತ ಪ್ರವೇಶಕ್ಕೆ ಮೇ 30 ರಿಂದ 31 ರವರೆಗೆ ಅರ್ಜಿ ಸಲ್ಲಿಸಬಹುದಾಗಿದ್ದು, ಜೂ.01 ರಂದು ಮೆರಿಟ್ ಆಧಾರದಲ್ಲಿ ಪ್ರವೇಶಾತಿ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9901942150 8217700892, 9448772224, 944834611 ಸಂಪರ್ಕಿಸಬಹುದಾಗಿದೆ ಎಂದು ಸಂಸ್ಥೆಯ ಪ್ರಾಂಶುಪಾಲರಾದ ವೀಣಾ ಎಸ್ ಬಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿಪ್ಲೋಮಾ ಆಫ್-ಲೈನ್ ಅರ್ಜಿ ಪ್ರವೇಶ

ಹಾಸನ: ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಪ್ರಥಮ ವರ್ಷಕ್ಕೆ ಪ್ರವೇಶಾತಿಯನ್ನು ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಹೊಂದಿರುವ ಮಹಿಳೆಯರಿಗಾಗಿ 3 ವರ್ಷದ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟಿಸ್, ಅಪರೆಲ್ ಡಿಸೈನ್ ಮತ್ತು ಪ್ಯಾಬ್ರಿಕೇಷನ್ ಟೆಕ್ನಾಲಜಿ, ಎಲೆಕ್ಟ್ರಾನಿಕ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್, ಲೈಬ್ರರಿ ಅಂಡ್ ಇನ್‌ಫರ್ ಮೇಷನ್ ಸೈನ್ ಕೋರ್ಸುಗಳ ಪ್ರವೇಶಾತಿಯನ್ನು ಮೆರಿಟ್ ಹಾಗೂ ರೋಸ್ಟರ್ ಅನುಗುಣವಾಗಿ ಆಫ್-ಲೈನ್ ಪ್ರವೇಶ ಪ್ರಕ್ರಿಯೆ ನಡೆಯುತ್ತಿದ್ದು, ವಿದ್ಯಾರ್ಥಿನಿಯರು ಸೂಕ್ತ ದಾಖಲಾತಿಗಳೊಂದಿಗೆ ಸಂಸ್ಥೆಯಲ್ಲಿ ಅರ್ಜಿ ಸಲ್ಲಿಸಿ ಪ್ರವೇಶವನ್ನು ಪಡೆಯಲು ಸೂಚಿಸಲಾಗಿದೆ.
ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯನ್ನು ಕಚೇರಿಯ ಸಮಯದಲ್ಲಿ ಸಂಪರ್ಕಿಸುವಂತೆ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಪ್ರಾಂಶುಪಾಲರು ತಿಳಿಸಿದ್ದಾರೆ.

ವಾರ್ಷಿಕ ಮಹಾಸಭಾ ನಡಾವಳಿ ಸಲ್ಲಿಸಲು ಕರೆ

ಹಾಸನ: ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಹಕಾರಿ ಹಾಗೂ ಸೌಹಾರ್ದ ಸಂಘಗಳು 2023-24 ನೇ ಸಾಲಿನ ಲೆಕ್ಕಪರಿಶೋಧನೆ ಆಯ್ಕೆ ಮಾಡಿಕೊಂಡಿರುವ ಇಲಾಖಾ/ ಸನ್ನದು ಲೆಕ್ಕಪರಿಶೋಧಕರುಗಳಿಗೆ ಆರ್ಥಿಕ ಹಾಗೂ ಲೆಕ್ಕಪುಸ್ತಕಗಳನ್ನು ಹಾಜರು ಪಡಿಸಿ ಆಗಸ್ಟ್ 31. ಒಳಗಾಗಿ ಲೆಕ್ಕಪರಿಶೋಧನೆ ಪೂರೈಸಿಕೊಂಡು, ಹಾಗೂ ಸೆಪ್ಟೆಂಬರ್ 25ನೇ ಒಳಗೆ ವಾರ್ಷಿಕ ಮಹಾಸಭೆ ನಡೆಸಿ, ಅಧ್ಯಕ್ಷರು ಮತ್ತು ಕಾರ್ಯನಿರ್ವಾಹಕರು ದೃಢೀಕರಿಸಿ ಏಳು ದಿನಗಳೊಳಗಾಗಿ ವಾರ್ಷಿಕ ಮಹಾಸಭಾ ನಡಾವಳಿಯನ್ನು ಕಚೇರಿಗೆ ಸಲ್ಲಿಸಲು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ರಂಗ ಶಿಕ್ಷಣಕ್ಕೆ ಅರ್ಜಿ ಆಹ್ವಾನ

ಹಾಸನ: ಕರ್ನಾಟಕ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆಯು 2024-25ನೇಸಾಲಿನ ರಂಗ ಶಿಕ್ಷಣಕ್ಕೆ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುತ್ತದೆ.
ಪ್ರವೇಶಕ್ಕೆ ಕನಿಷ್ಠ ವಿದ್ಯಾರ್ಹತೆ SSLC ಉತೀರ್ಣರಾಗಿರಬೇಕು ಪದವೀಧರರಿಗೆ ಆದ್ಯತೆ ಇರುತ್ತದೆ. ರಂಗಭೂಮಿಯಲ್ಲಿ ಆಸಕ್ತಿ ಇದ್ದು, ಸ್ವಲ್ಪಮಟ್ಟಿನ ಅನುಭವ ಇರಬೇಕಾದ್ದು ಅಗತ್ಯ. ವಿದ್ಯಾರ್ಥಿ ವಿದ್ಯಾಥಿನಿಯರಿಗೆ ಊಟ-ವಸತಿ ವ್ಯವಸ್ಥೆ ದೊರೆಯುತ್ತದೆ. ಕರ್ನಾಟಕ ಹಾಗೂ ಭಾರತದ ರಂಗತಜ್ಞರಿಂದ ಮತ್ತು ಅಥಿತಿ ಉಪನ್ಯಾಸಕರಿಂದ ತರಗತಿಗಳು ನಡೆಯುತ್ತವೆ. ಗ್ರಂಥ ಭಂಡಾರ ಹಾಗೂ ದೃಶ್ಯ ಶ್ರವ್ಯ ಪರಿಕರಗಳ ಅನುಕೂಲತೆ ಇದೆ. ರಂಗಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಭಾರತೀಯ ರಂಗಭೂಮಿ, ಕನ್ನಡ ಮತ್ತು ನಾಟಕ ಸಾಹಿತ್ಯ ಪರಂಪರೆ, ಪಾಶ್ಚಾತ್ಯ ರಂಗಭೂಮಿ, ಅಭಿನಯ, ಆಹಾರ್ಯ, ಶಿಕ್ಷಣದಲ್ಲಿ ರಂಗಭೂಮಿ, ಕುರಿತಾದ ಸೈದ್ಧಾಂತಿಕ ಮತ್ತು ಪ್ರಾಯೋಗಿಕ ತರಗತಿಗಳು ನಡೆಯುತ್ತವೆ.
ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆ ಸಾಣೇಹಳ್ಳಿ ಹೊಸದುರ್ಗ ತಾ.ಚಿತ್ರದುರ್ಗ ಜಿಲ್ಲೆ. ಮಾಹಿತಿಗಾಗಿ 9448398144, 8861043553, 9482942394, 9972007015 ಸಂಪರ್ಕಿಸುವಂತೆ ರಂಗ ತರಬೇತಿ ಶಾಲೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

35 ದಿನದ ಬಳಿಕ ಕೊನೆಗೂ ಭಾರತಕ್ಕೆ ಬಂದ ರಸಿಕ ಸಂಸದ ಬಂದಿಳಿಯುತ್ತಿದ್ದಂತೆ ಮನ್ಮಥನನ್ನು ಬಂಧಿಸಿದ ಎಸ್.ಐ.ಟಿ ಅಧಿಕಾರಿಗಳು

ಪ್ರಜ್ವಲ್ ಲಾಕ್..!

ಬೆಂಗಳೂರು: ಸತತ 34 ದಿನದಿಂದ ಜರ್ಮನಿ ದೇಶದಲ್ಲಿ ತಲೆ ಮರೆಸಿಕೊಂಡಿದ್ದ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರು ಕೊನೆಗೂ ಬೆಂಗಳೂರಿಗೆ ಬಂದಿಳಿದಿದ್ದು, ಅವರನ್ನು ಎಸ್‌ಐಟಿ ಬಂಧಿಸಿದೆ.
ಹಾಸನದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣ ಹಾಗೂ ಅತ್ಯಾಚಾರ ಪ್ರಕರಣಗಳಲ್ಲಿ ಸಿಲುಕಿರುವ ಪ್ರಜ್ವಲ್ ರೇವಣ್ಣ ಬಂಧನಕ್ಕೆ ವಿಶೇಷ ತನಿಖಾ ತಂಡ ಬಲೆ ಬೀಸಿತ್ತು. ನಿರಂತರ ಪ್ರಯತ್ನ ನಂತರ ಗುರುವಾರ ಮಧ್ಯರಾತ್ರಿ ದೇಶಕ್ಕೆ ಮರಳಿದ ಪ್ರಜ್ವಲ್ ಅವರನ್ನು ನಿರೀಕ್ಷೆಯಂತೆಯೇ ಎಸ್‌ಐಟಿ ಪೊಲೀಸರು ಬೆಂಗಳೂರು ಪೊಲೀಸರು ಹಾಗೂ ವಿಮಾನ ನಿಲ್ದಾಣದ ಅಧಿಕಾರಿಗಳ ಸಹಕಾರದಿಂದ ವಶಕ್ಕೆ ಪಡೆದರು.
ಸತತ ಪ್ರಯಾಣದಿಂದ ಬಳಲಿದ್ದರೂ ಸಹಜವಾಗಿಯೇ ಬಂದ ಪ್ರಜ್ವಲ್ ಅವರನ್ನು ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ತಮ್ಮ ವಶಕ್ಕೆ ತೆಗೆದುಕೊಂಡರು.
ಜರ್ಮನಿ ಮೂನಿಚ್ ನಗರದಿಂದ ಲುಫ್ತಾನ್ಸ ಏರ್‌ಲೈನ್ಸ್‌ನಲ್ಲಿ ಎಲ್‌ಎಚ್764 ಸಂಖ್ಯೆಯ ವಿಮಾನ ರಾತ್ರಿ 12.45ರ ಹೊತ್ತಿಗೆ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿಯಿತು. ಅರ್ಧ ಗಂಟೆಯವರೆಗೂ ಪರಿಶೀಲನೆ ಪ್ರಕ್ರಿಯೆ ಮುಗಿಸಿ ಟರ್ಮಿನಲ್2 ಗೇಟ್ ಮೂಲಕ ಆಗಮಿಸಿದರು. ಈ ವೇಳೆ ತಮ್ಮ ನಾಲ್ಕು ಲಗೇಟ್ ಬ್ಯಾಗ್‌ಗಳೊಂದಿಗೆ ಹೊರಕ್ಕೆ ಬಂದ ಪ್ರಜ್ವಲ್ ಅವರನ್ನು ವಿಮಾನ ನಿಲ್ದಾಣದ ಇಮಿಗ್ರೇಷನ್ ಅಧಿಕಾರಿಗಳು ಹಾಗೂ ಕೈಗಾರಿಕಾ ಭದ್ರತಾ ಪಡೆಯ ಸಿಬ್ಬಂದಿ ಸಹಕಾರದಿಂದ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ವಶಕ್ಕೆ ಪಡೆದರು.
ತಮ್ಮನ್ನು ಸುತ್ತುವರೆದು ಬಂಧನಕ್ಕೆ ಮುಂದಾದಾಗ ಯಾವುದೇ ಪ್ರತಿರೋಧ ತೋರದೆಯೇ ಪ್ರಜ್ವಲ್ ರೇವಣ್ಣ ಅವರೊಂದಿಗೆ ಹೊರಟರು. ಪೊಲೀಸ್ ವಾಹನದಲ್ಲಿ ಕುಳ್ಳಿರಿಸಿಕೊಂಡು ಹತ್ತಕ್ಕೂ ಹೆಚ್ಚು

ಪೊಲೀಸ್ ವಾಹನಗಳ ಭದ್ರತೆಯಲ್ಲಿ ರಾತ್ರಿ 2 ರ ಹೊತ್ತಿಗೆ ಅವರನ್ನು ಕರೆ ದೊಯ್ಯಲಾಯಿತು.
ಅಲ್ಲಿಂದ ಅವರನ್ನು ಸಿಐಡಿ ಕಚೇರಿ ಕಾರ್ಲಟನ್ ಭವನಕ್ಕೆ ಕರೆದೊಯ್ಯ ಲಾಯಿತು. ಸಿಐಡಿ ಕಚೇರಿಯಲ್ಲೇ ಪ್ರಜ್ವಲ್ ರೇವಣ್ಣ ಅವರ ವಿಚಾರಣೆಯೂ ಶುರುವಾಯಿತು.
ಪ್ರಜ್ವಲ್ ರೇವಣ್ಣ ಮುನಿಚ್ ನಗರದಿಂದ ಹೊರಟಿರುವ ಮಾಹಿತಿ ಖಚಿತಪಡಿಸಿಕೊಂಡ ಪೊಲೀಸರು ಹೆಚ್ಚಿನ ಭದ್ರತೆಯನ್ನು ಹಾಕಿ ಕಾಯುತ್ತಿದ್ದರು. ವಿಮಾನ ನಿಲ್ದಾಣ, ಸಿಐಡಿ ಕಚೇರಿಗೆ ಭಾರೀ ಭದ್ರತೆ ಒದಗಿಸಿದ್ದರು. ವಿಮಾನ ಯಾವ ಮಾರ್ಗದಲ್ಲಿದೆ. ಎಲ್ಲಿ ಬರುತ್ತಿದೆ ಎನ್ನುವುದರ ಕ್ಷಣ ಕ್ಷಣದ ಮಾಹಿತಿಯನ್ನೂ ಪೊಲೀಸರು ತಂತ್ರಜ್ಞಾನದ ನೆರವಿನಿಂದ ಪಡೆಯುತ್ತಿದ್ದರು. ಪ್ರಜ್ವಲ್ ರೇವಣ್ಣ ಈಗಾಗಲೇ ಎರಡು ಬಾರಿ ವಿಮಾನ ಟಿಕೆಟ್ ಬುಕ್ ಮಾಡಿಸಿ ಕೊನೆಗೆ ರದ್ದುಪಡಿಸಿದ್ದರಿಂದ ಪೊಲೀಸರು ಮುನ್ನೆಚ್ಚರಿಕೆ ವಹಿಸಿದ್ದರು. ಅಲ್ಲದೇ ಇದು ಹೈ ಪ್ರೊಫೈಲ್ ಪ್ರಕರಣವೂ ಆಗಿರುವುದರಿಂದ ಕ್ಷಣ ಕ್ಷಣದಲ್ಲೂ ಅಲರ್ಟ್ ಆಗಿದ್ದುದು ಕಂಡು ಬಂದಿತು.
ಕರ್ನಾಟಕ ಮಾತ್ರವಲ್ಲದೇ ಭಾರತ, ಅಂತರಾಷ್ಟ್ರೀಯ ಮಟ್ಟದಲ್ಲೂ ಭಾರೀ ಸಂಚಲನ ಮೂಡಿಸಿರುವ ಪ್ರಕರಣದಲ್ಲಿ ಪ್ರಜ್ವಲ್ ಅವರನ್ನು ಬಂಧಿಸುವಂತೆ ಭಾರೀ ಒತ್ತಾಯ ಕೇಳಿ ಬಂದಿತ್ತು. ಈ ಪ್ರಕರಣದಲ್ಲಿ ಈಗಾಗಲೇ ಅವರ ತಂದೆ ಎಚ್.ಡಿ.ರೇವಣ್ಣ ಬಂಧನಕ್ಕೆ ಒಳಗಾಗಿ ಬಿಡುಗಡೆಯಾಗಿದ್ದಾರೆ. ವಕೀಲ ದೇವರಾಜಗೌಡ ಕೂಡ ಬಂಧನಕ್ಕೆ ಒಳಗಾಗಿ ಹಾಸನ ಜೈಲಿನಲ್ಲಿದ್ದಾರೆ.
ಪೆನ್ ಡ್ರೈವ್ ಹಂಚಿಕೆ ಪ್ರಕರಣದಲ್ಲಿಯೇ ನವೀನ್‌ಗೌಡ ಸೇರಿದಂತೆ ಹಲವರನ್ನು ಪೊಲೀಸರು ಈಗಾಗಲೇ ಬಂಧಿಸಿದ್ದಾರೆ. ಈ ಪ್ರಕರಣದಲ್ಲಿ ಪೆನ್‌ಡ್ರೈವ್ ಹಂಚಿಕೆ ಪ್ರಕರಣ ಎದುರಿಸುತ್ತಿರುವ ಪ್ರಜ್ವಲ್ ಅವರ ಕಾರು ಚಾಲಕ ಕಾರ್ತಿಕ್ ಗೌಡ ಬಂಧನಕ್ಕೂ ಪೊಲೀಸರು ಬಲೆ ಬೀಸಿದ್ದು, ಅವರು ವಿದೇಶದಲ್ಲಿರುವ ಮಾಹಿತಿಯಿದೆ. ಅವರನ್ನು ಶೀಘ್ರದಲ್ಲೇ ಬಂಧಿಸಲಾಗುವುದು ಎಂದು ಪೊಲೀಸ್ ಮೂಲಗಳು ತಿಳಿಸಿವೆ.
ಈ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ವಿರುದ್ಧ ಲುಕ್ ಔಟ್ ನೋಟೀಸ್ ಜಾರಿಗೊಳಿಸಿ ಆನಂತರ ಬ್ಲೂ ಕಾರ್ನರ್ ನೋಟೀಸ್ ಕೂಡ ಜಾರಿ ಮಾಡಲಾಗಿತ್ತು.

ಪರಪ್ಪನ ಅಗ್ರಹಾರ
ಜರ್ಮನಿ To ಜೈಲ್

ಬೆಂಗಳೂರು: ಬರೋಬ್ಬರಿ 35 ದಿನಗಳ ಕಾಲ ಜರ್ಮನಿಯಲ್ಲಿ ತಲೆಮರೆಸಿಕೊಂಡಿದ್ದ ಹಾಸನ ಜೆಡಿಎಸ್ ಸಂಸದ, ಅಶ್ಲೀಯ ವಿಡಿಯೋ ಪ್ರಕರಣ ಆರೋಪಿ ಪ್ರಜ್ವಲ್ ರೇವಣ್ಣ ಅಂತಿಮವಾಗಿ ಬೆಂಗಳೂರಿಗೆ ವಾಪಸಾಗಿದ್ದು, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅವರನ್ನು ಎಸ್‌ಐಟಿ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ.
ಲುಫ್ತಾನ್ಸ್ ಏರ್ ಲೈನ್ಸ್ ವಿಮಾನದಲ್ಲಿ ಜರ್ಮನಿಯ ಮೂನಿಕ್ ನಗರದಿಂದ ಬೆಂಗಳೂರಿಗೆ ಆಗಮಿಸಿದ ಪ್ರಜ್ವಲ್ ರೇವಣ್ಣರನ್ನು ಬಂಧಿಸಲು ಎಸ್‌ಐಟಿ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಂಡಿತ್ತು. ಇಮಿಗ್ರೇಷನ್ ಅಧಿಕಾರಿಗಳ ವಶಕ್ಕೆ ಪ್ರಜ್ವಲ್ ರೇವಣ್ಣ ಜರ್ಮನಿಗೆ ತೆರಳಿದ್ದ ನಂತರ ಅವರ ಬಂಧನಕ್ಕೆ ಲುಕ್‌ಔಟ್ ನೋಟಿಸ್ ಹೊರಡಿಸಲಾಗಿದ್ದರಿಂದ ಇಮಿಗ್ರೇಷನ್ ಅಧಿಕಾರಿಗಳು ಮೊದಲು ಅವರನ್ನು ವಶಕ್ಕೆ ಪಡೆದರು. ಬಳಿಕ ಎಸ್‌ಐಟಿ ಅಧಿಕಾರಿಗಳಿಗೆ ಹಸ್ತಾಂತರ ಮಾಡಿದರು.
ಇಂದು ಬೆಳಗ್ಗೆ ಪ್ರಜ್ವಲ್ ರೇವಣ್ಣ ಆರೋಗ್ಯ ತಪಾಸಣೆ ನಡೆಸಲಿದ್ದು ಬಳಿಕ ಪ್ರಜ್ವಲ್ ರೇವಣ್ಣನನ್ನು ನ್ಯಾಯಾಧೀಶರ ಮುಂದೆ ಹಾಜರುಪಡಿಸಲಿದ್ದಾರೆ. ಹೆಚ್ಚಿನ ವಿಚಾರಣೆಗಾಗಿ ಎಸ್‌ಐಟಿ ಪ್ರಜ್ವಲ್ ರೇವಣ್ಣರನ್ನು ವಶಕ್ಕೆ ನೀಡುವಂತೆ ನ್ಯಾಯಾಲಯಕ್ಕೆ ಮನವಿ ಮಾಡಲಿದೆ.
ಏಪ್ರಿಲ್ 26ರಂದು ಲೋಕಸಭಾ ಚುನಾವಣೆ ಮತದಾನದ ಬಳಿಕ ಪ್ರಜ್ವಲ್ ರೇವಣ್ಣ ಜರ್ಮನಿಗೆ ತೆರಳಿದ್ದರು. ಅದಾದ ಬಳಿಕ ಕಣ್ಮರೆಯಾಗಿದ್ದ ಅವರು, ಬಳಿಕ ಸಾಮಾಜಿಕ ಮಾಧ್ಯಮದಲ್ಲಿ ತಾವು ಮೇ 30ರಂದು ಬೆಂಗಳೂರಿಗೆ ಬರುತ್ತಿರುವುದಾಗಿ ಮಾಹಿತಿ ನೀಡಿದ್ದರು. ಅದರಂತೆ ಇಂದು ಪ್ರಜ್ವಲ್ ರೇವಣ್ಣ ವಿದೇಶದಿಂದ ವಿಮಾನದಲ್ಲಿ ಭಾರತಕ್ಕೆ ಬಂದಿಳಿದಿದ್ದಾರೆ. ಇಂದು ಅವರ ವಿಚಾರಣೆ ನಡೆಯುವ ಸಾಧ್ಯತೆಯಿದೆ

ಪ್ರಜ್ವಲ್ ಬಂಧನಕ್ಕೆ ಬೃಹತ್ ಪ್ರತಿಭಟನೆ

ಹಾಸನ: ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಪ್ರಮುಖ ಆರೋಪಿಯಾಗಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣರನ್ನು ವಿಮಾನ ನಿಲ್ದಾಣದಲ್ಲೇ ಬಂಧಿಸಬೇಕು ಹಾಗೂ ವಿಡಿಯೋ ಹಂಚಿದವರನ್ನೂ ಬಂಧಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ಜನಪರ ಚಳವಳಿಗಳ ಒಕ್ಕೂಟದ ಕಾರ್ಯಕರ್ತರು ಇಂದು ಹಾಸನದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದರು.
ಪ್ರತಿಭಟನಾ ಸಮಾವೇಶದಲ್ಲಿ ಭಾಗವಹಿಸಿದ ಹೋರಾಟಗಾರ ಎಸ್. ಆರ್ ಹಿರೇಮಠ. ಹಾಸನದ ಈ ಹೋರಾಟ ನಮ್ಮ ದೇಶ ಮಾತ್ರವಲ್ಲ ಜಗತ್ತಿನ ಮಹಿಳೆಯರ ಘನತೆ ಕಡೆಗೆ ಗೌರವದ ಕಡೆಗಿನ ನಡಿಗೆಯಾಗಿದೆ ಎಂದರು. ದೇವೇಗೌಡರ ಕುಟುಂಬದ ಪಾಳೆಗಾರಿ ಮನಸ್ಥಿತಿಯ ವಿರುದ್ಧದ ಹೋರಾಟ ಇದು. ಅವರ ದರ್ಪದಿಂದ ಆಗುವ ಇಂತಹ ಕೃತ್ಯ ಕೊನೆಗಾಣಿಸೊ ಹೋರಾಟ ಇದಾಗಲಿ. ಇದಕ್ಕೆ ನ್ಯಾಯ ಪಡೆಯಲು ನಿರಂತರ ಹೋರಾಟ ಬೇಕಿದೆ. ಈ ಹೋರಾಟದಲ್ಲಿ ನಾವು ನಿಮ್ಮೊಟ್ಟಿಗೆ ಇದ್ದೇವೆ. ಬಳ್ಳಾರಿಯಲ್ಲಿ ಜನಾರ್ದನ ರೆಡ್ಡಿ ಪಾಳೆಗಾರಿಕೆ ವಿರುದ್ಧ ಹೋರಾಟ ನಡೆಯಿತು. ಈಗ ಹಾಸನದಲ್ಲಿ ಈ ದಬ್ಬಾಳಿಕೆ ಕೊನೆಗಾಣಿಸಲು ಹೋರಾಟ ಆರಂಭ ಆಗಿದೆ. ನೊಂದವರು ಧೈರ್ಯದಿಂದ ಹೊರ ಬಂದು ಮಾತನಾಡುವಂತೆ ಆಗಲಿ. ಸಿಎಂ, ಡಿಸಿಎಂ, ಗೃಹ ಸಚಿವರೇ ಈಗಲಾದರೂ ಹಾಸನಕ್ಕೆ ಬನ್ನಿ ಎಂದು ಆಗ್ರಹಿಸಿದರು.

ರಕ್ಷಣೆ ನೀಡುತ್ತಿರೋ ಕೇಂದ್ರದ ಸರ್ಕಾರವನ್ನು ಕಿತ್ತೊಗೆಯುತ್ತೇವೆ ಎಂದು ಹೋರಾಟಗಾರ್ತಿ ಸುಭಾಷಿಣಿ ಅಲಿ ಕಿಡಿ ಕಾರಿದರು.
ಅಸಹಾಯಕ ಮಹಿಳೆಯರ ಪರವಾಗಿ ನಿಲ್ಲಲು ನಾವು ಇಲ್ಲಿಗೆ ಬಂದಿದ್ದೇವೆ. ಚುನಾವಣೆಯಲ್ಲಿ ಮತ ಕೊಟ್ಟು ಜನಸೇವೆಯನ್ನು ಮಾಡೋದಕ್ಕೆ

ನಾವೆದ್ದು ನಿಲ್ಲದಿದ್ದರೇ...

ಸಮಾವೇಶಕ್ಕೆ ಖರ್ಚಾಗಿದ್ದು ಬರೋಬ್ಬರಿ 2 ಕೋಟಿ..!

ಹೌದು, ಪೆನ್ ಡ್ರೈವ್ ಪ್ರಕರಣದಲ್ಲಿ ವಿವಿಧ ಜಿಲ್ಲೆಯಿಂದ ಭಾಗಿಯಾದ ಕರ್ನಾಟಕ ಜನಪರ ಚಳವಳಿಗಳ ಒಕ್ಕೂಟದ ಸುಮಾರು 8-10 ಸಾವಿರ ಕಾರ್ಯಕರ್ತರುಗಳು ಹಾಸನಕ್ಕೆ ಬರಲು, ವಾಹನದ ವ್ಯವಸ್ಥೆ, ಅವರಿಗೆ ಊಟ, ವಸತಿ ವ್ಯವಸ್ಥೆ, ಬ್ಯಾನರ್, ಬಂಟಿಂಗ್, ವೇದಿಕೆ ನಿರ್ಮಾಣ, ಕುರ್ಚಿಗಳು ಸೇರಿದಂತೆ ಈ ಒಂದು ದಿನದ ಪ್ರತಿಭಟನೆಗೆ ಸುಮಾರು 2 ಕೋಟಿಗಳಷ್ಟು ಖರ್ಚಾಗಿದೆಯೆಂಬುದು ಹೆಸರನ್ನು ಹೇಳಲು ಇಚ್ಛೆಪಡದ ಪ್ರತಿಭಟನಾ ಮುಖಂಡರೊಬ್ಬರ ಮಾತಾಗಿದ್ದು, ಇನ್ನು ಪ್ರತಿಭಟನೆಯ ನೇತೃತ್ವವನ್ನು ಯಾರು ವಹಿಸಿಕೊಂಡಿದ್ದರು..? ಖರ್ಚು-ವ್ಯಚ್ಚವನ್ನು ಹೇಗೆ ನಿಭಾಯಿಸಿದರು..? ಎಂಬೆಲ್ಲಾ ಚರ್ಚೆ ಹಾಸನದ ಖಾಸಗಿ ಹೋಟೆಲ್ ನಲ್ಲಿ ನಡೆದಿದೆಯಂತೆ.

ನಾವೆಲ್ಲಾ ಇಂದು ಇಲ್ಲಿ ಸೇರಿರುವದು ಲೈಂಗಿಕ ದಬ್ಬಾಳಿಕೆಯನ್ನು ಖಂಡಿಸಿ, ನೊಂದ ಮಹಿಳೆಯರಿಗೆ ಧೈರ್ಯ ಕೊಡುವುದಕ್ಕೆ ಅಂತ ಬಂದಿದ್ದೇವೆ. ಹಣಬಲ, ಅಧಿಕಾರ ಮದದಿಂದ ನಡೆಸಿರುವ ದೌರ್ಜನ್ಯ ಇನ್ನುಂದೆ ನಡೆಯೋದಿಲ್ಲ. ನಾನು ದೂರದ ಉತ್ತರಪ್ರದೇಶದಿಂದ ಬಂದಿದ್ದೇನೆ. ಈ ದೌರ್ಜನ್ಯದ ವಿರುದ್ಧ ದೇಶದ ಜನತೆ ಆಕ್ರೋಶ ವ್ಯಕ್ತಪಡಿಸುತ್ತಿದೆ. ಇಂತಹ ಪ್ರಕರಣಗಳ ಆರೋಪಿಗಳಿಗೆ ಸ್ವಾತಂತ್ರ್ಯ ಸಿಕ್ಕಿ ಹಲವು ವರ್ಷಗಳಾದರೂ ಮಹಿಳೆ ದಬ್ಬಾಳಿಕೆ, ದೌರ್ಜನ್ಯ ನಡೆಯುತ್ತಲೇ ಬಂದಿದೆ. ಪ್ರಜ್ವಲ್ ರೇವಣ್ಣ, ರೇವಣ್ಣ ಸೇರಿ ಯಾರು ಈ ಕೃತ್ಯದಲ್ಲಿ ಭಾಗಿಯಾಗಿದ್ದಾರೋ ಅವರೆಲ್ಲರನ್ನೂ ಬಂಧಿಸಬೇಕು. ಅವರಿಗೆ ಯಾವುದೇ ಕಾರಣಕ್ಕೂ ಬೇಲ್ ಕೊಡಬಾರದು. ಉಳ್ಳವರು ಅಂತ ಅವರನ್ನು ಸರ್ಕಾರ ಯಾವುದೇ ಕಾರಣಕ್ಕೂ ರಕ್ಷಣೆ ಮಾಡೋದಕ್ಕೆ ಮುಂದಾಗಬಾರದು. ಕಳುಹಿಸಿದ್ದೇವೆ. ಆದ್ರೆ ನೀವು ಮಾಡಿದ್ದು ಏನು? ಅಧಿಕಾರಿಗಳನ್ನೂ ಬಿಡಲಿಲ್ಲ, ಕಾರ್ಯಕರ್ತರನ್ನೂ ಬಿಡಲಿಲ್ಲ, ಸಹಾಯ ಕೇಳಿ ಬಂದವರನ್ನೂ ಬಿಡಲಿಲ್ಲ, ಕೊನೆಗೆ ನಿಮ್ಮ ತಾಯಿಯಷ್ಟು ವಯಸ್ಸಾದವರನ್ನೂ ಬಿಡಲಿಲ್ಲ ಎಂದು ಅವರು ಸುಭಾಷಿಣಿ ಗುಡುಗಿದರು.
ಹಾಸನದಲ್ಲಿ ನಡೆದ ಬೃಹತ್ ಹಾಸನ ಚಲೋ ಪ್ರತಿಭಟನಾ ಮೆರವಣಿಗೆಯಲ್ಲಿ ರಾಜ್ಯದ ಹಲವೆಡೆಗಳಿಂದ ಬಂದ 113 ಸಂಘಟನೆಗಳ ಸುಮಾರು 5-6 ಸಾವಿರ ಪ್ರತಿನಿಧಿಗಳು ಭಾಗವಹಿಸಿದ್ದರು.. ಹಾಸನದ ಹೇಮಾವತಿ ಪ್ರತಿಮೆಯ ಬಳಿಯಿಂದ ಮೆರವಣಿಗೆ ಆರಂಭವಾಯಿತು. ಜಿಲ್ಲಾಧಿಕಾರಿ ಕಚೇರಿ ಬಳಿಯ ಹೊಸ ಬಸ್‌ನಿಲ್ದಾಣ ರಸ್ತೆಯಲ್ಲಿ ಬಹಿರಂಗ ಸಭೆ ನಡೆಸಿದರು. ಸಿಪಿಎಂ ನಾಯಕಿ ಸುಭಾಷಿಣಿ ಅಲಿ, ಜನವಾದಿ ಮಹಿಳಾ ಸಂಘಟನೆ ಅಧ್ಯಕ್ಷೆ ಮೀನಾಕ್ಷಿ ಬಾಳಿ, ಲೇಖಕಿಯರಾದ ಬಾನು ಮುಷ್ತಾಕ್, ರೂಪ ಹಾಸನ ಸೇರಿದಂತೆ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.
ಮಹಿಳೆಯರು, ವಿದ್ಯಾರ್ಥಿಗಳು, ಸಾಹಿತಿಗಳು, ಬುದ್ಧಿಜೀವಿಗಳು, ಕಲಾವಿದರನ್ನು ಒಳಗೊಂಡ ಹಲವಾರು ಸಂಘಟನೆಗಳು ಪ್ರಜ್ವಲ್ ರೇವಣ್ಣ ವಿರುದ್ಧ ಪ್ರತಿಭಟನೆಗೆ ಆಗಮಿಸಿದ್ದಾರೆ. ಬೆಂಗಳೂರು, ಮೈಸೂರು, ಹಾಸನ, ಮಂಗಳೂರು, ಮಂಡ್ಯ ಮತ್ತು ಚಿಕ್ಕಮಗಳೂರುಗಳಿಂದ ಮಹಿಳೆಯರ ಮೇಲಿನ ಲೈಂಗಿಕ ಶೋಷಣೆಯನ್ನು ವಿರೋಧಿಸಿ ಹಾಸನ ಚಲೋ ಪ್ರತಿಭಟನೆ ಯಶಸ್ವಿಯಾಗಿ ನಡೆಯಿತು.

ಹಾಸನದ ಈ ಹೋರಾಟ ನಮ್ಮ ದೇಶ ಮಾತ್ರವಲ್ಲ , ಜಗತ್ತಿನ ಮಹಿಳೆಯರ ಘನತೆ ಕಡೆಗೆ ಗೌರವದ ಕಡೆಗಿನ ನಡಿಗೆಯಾಗಿದೆ. ದೇವೇಗೌಡರ ಕುಟುಂಬದ ಪಾಳೆಗಾರಿಕೆ ಮನಸ್ಥಿತಿಯ ವಿರುದ್ಧದ ಹೋರಾಟ ಇದು. ಅವರ ದರ್ಪದಿಂದ ಆಗುವ ಇಂತಹ ಕೃತ್ಯ ಕೊನೆಗಾಣಿಸೊ ಹೋರಾಟ. ಇದಕ್ಕೆ ನ್ಯಾಯ ಪಡೆಯಲು ನಿರಂತರ ಹೋರಾಟ ಬೇಕಿದೆ. ಈ ಹೋರಾಟದಲ್ಲಿ ನಾವು ನಿಮ್ಮೊಟ್ಟಿಗೆ ಇದ್ದೇವೆ. ಬಳ್ಳಾರಿಯಲ್ಲಿ ಜನಾರ್ದನ ರೆಡ್ಡಿ ಪಾಳೆಗಾರಿಕೆ ವಿರುದ್ಧ ಹೋರಾಟ ನಡೆಯಿತು. ಈಗ ಹಾಸನದಲ್ಲಿ ಈ ದಬ್ಬಾಳಿಕೆ ಕೊನೆಗಾಣಿಸಲು ಹೋರಾಟ ಆರಂಭ ಆಗಿದೆ.
ಎಸ್.ಆರ್. ಹಿರೇಮಠ್
-ಸಾಮಾಜಿಕ ಹೋರಾಟಗಾರ

ಸರ್ಕಾರದ ಪತನಕ್ಕಾಗಿ ಶತ್ರು ಭೈರವಿ ಯಾಗ
ಹೊಸ ಬಾಂಬ್ ಸಿಡಿಸಿದ ಡಿಸಿಎಂ ಡಿಕೆಶಿ

ಬೆಂಗಳೂರು: ನನ್ನ ಮತ್ತು ಮುಖ್ಯಮಂತ್ರಿಗಳ ಮೇಲೆ ಹಾಗೂ ನಮ್ಮ ಸರ್ಕಾರದ ವಿರುದ್ಧ ಶತ್ರು ಭೈರವಿ ಯಾಗ ಮಾಡಿಸುತ್ತಿದ್ದಾರೆ. ಇದು ನಮ್ಮ ಸರ್ಕಾರವನ್ನು ನಾಶ ಮಾಡಬೇಕು ಅಂತಾ ರಾಜಕೀಯದಲ್ಲಿ ಇರುವವರೇ ಮಾಡಿಸುತ್ತಿರುವ ಯಾಗ ಅದಕ್ಕಾಗಿ ಅಘೋರಿಗಳ ಮೊರೆ ಹೋಗಿದ್ದಾರೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೊಸ ಬಾಂಬ್ ಸಿಡಿಸಿದ್ದಾರೆ. ಕೇರಳದ ರಾಜರಾಜೇಶ್ವರ ದೇವಸ್ಥಾನದ ಆಸುಪಾಸಿನಲ್ಲಿ ಶತ್ರು ನಾಶಕ್ಕಾಗಿ ಶತ್ರು ಭೈರವಿ ಯಾಗ ನಡೆಯುತ್ತಿದೆ. ನಮ್ಮ ಸರ್ಕಾರವನ್ನು ನಾಶ ಮಾಡಬೇಕು ಅಂತ ಅಘೋರಿಗಳ ಮೊರೆ ಹೋಗಿದ್ದಾರೆ. ಶತ್ರು ಸಂಹಾರ ಯಾಗ ಮಾಡಿಸುವುದಕ್ಕಾಗಿಯೇ 5 ಹಂದಿ, 3 ಎಮ್ಮೆ , 21 ಕಪ್ಪು ಬಣ್ಣದ ಕುರಿ, 21 ಮೇಕೆಗಳನ್ನ ಬಲಿ ಕೊಡ್ತಿದ್ದಾರೆ. ಈ ಶತ್ರು ಸಂಹಾರ ಯಾಗ ಯಾರು ಮಾಡ್ತಿದ್ದಾರೆ? ಯಾರು ಮಾಡಿಸುತ್ತಿದ್ದಾರೆ? ಎಲ್ಲವೂ ನನಗೆ ಗೊತ್ತಿದೆ. ಇದೆಲ್ಲವನ್ನು ರಾಜಕೀಯದಲ್ಲಿ ಇರುವವರೇ ಮಾಡೋದು. ಆದ್ರೆ ಈ ಬಗ್ಗೆ ಸದ್ಯಕ್ಕೆ ನಾನು ಏನೂ ಮಾತಾಡೋದಿಲ್ಲ ಎಂದು ಆತಂಕಕಾರಿ ಸಂಗತಿಯನ್ನ ಬಿಚ್ಚಿಟ್ಟಿದ್ದಾರೆ. ಆದ್ರೆ ನಮ್ಮ ದೇವರ ಕೃಪೆ ಬಹಳ ಜೋರಾಗಿದೆ. ನಾನು ಹೊರಗೆ ಹೋಗುವ ಪ್ರತಿದಿನ ದೇವರಿಗೆ ಕೈ ಮುಗಿದು ಹೋಗ್ತೀನಿ. ಅದಕ್ಕೆ ಇಷ್ಟು ರಕ್ಷಣೆ ಎಲ್ಲಾ ಇದೆ ಎಂದ ಅವರು ಶತ್ರು ಸಂಹಾರ ಯಾಗದ ಬಗ್ಗೆ ಚೀಟಿಯಲ್ಲಿ ಬರೆದುಕೊಂಡಿದ್ದನ್ನ ಮಾಧ್ಯಮಗಳ ಮುಂದೆ ಪ್ರಸ್ತುತಪಡಿಸಿದ್ದಾರೆ. ಅವರ ನಂಬಿಕೆ ಅವರು ಮಾಡಲಿ. ಆದ್ರೆ ನಾವು ನಂಬಿರುವ ದೇವರು ನಮ್ಮನ್ನ ಕಾಪಾಡುತ್ತದೆ ಎಂದು ಹೇಳಿದ್ದಾರೆ

ಪೆನ್ ಡ್ರೈವ್ ಹಂಚಿಕೆ ಆರೋಪಿಗಳಿಗೆ ಜಾಮೀನು

ಹಾಸನ: ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋಗಳನ್ನು ಹಂಚಿಕೊಂಡ ಪ್ರಕರಣದಲ್ಲಿ ಆರೋಪಿಗಳಾಗಿರುವ ಚೇತನ್ ಹಾಗೂ ಲಿಖಿತ್ ಗೌಡ ಎಂಬವರಿಗೆ ಜಾಮೀನು ಮಂಜೂರಾಗಿದೆ.
ಹಾಸನದ ಮೂರನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ಇಬ್ಬರಿಗೂ ಜಾಮೀನು ಮಂಜೂರು ದೊರೆತಿದೆ. ಪೆನ್ಡ್ರೈವ್ ಹಂಚಿಕೆ ಪ್ರಕರಣದಲ್ಲಿ ಇವರಿಬ್ಬರೂ ಆರನೇ ಮತ್ತು ಏಳನೇ ಆರೋಪಿಗಳಾಗಿದ್ದಾರೆ. ಯಲಗುಂದ ಚೇತನ್ ಹಾಗೂ ಲಿಖಿತ್ ಗೌಡ ಇವರಿಬ್ಬರೂ ಶಾಸಕ ಪ್ರೀತಂ ಗೌಡ ಅವರ ಆಪ್ತರು. ವಿಡಿಯೋದಲ್ಲಿರುವ ಮಹಿಳೆಯರ ಗುರುತು ಮರೆಮಾಚದೆ ಹಂಚಿದ ಆರೋಪ ಇವರ ಮೇಲಿದೆ. ಪ್ರಜ್ವಲ್ ರೇವಣ್ಣ ಜೊತೆಗೆ ಅಶ್ಲೀಲ ವಿಡಿಯೋ ಹಂಚಿಕೆ ಮಾಡಿದವರನ್ನೂ ಬಂಧನದಲ್ಲಿಡಬೇಕು ಎಂದು ಮಹಿಳಾ ಹೋರಾಟಗಾರರು ಆಗ್ರಹಿಸಿ ಇಂದು ಹಾಸನದಲ್ಲಿ ಪ್ರತಿಭಟನೆ ನಡೆಸಿದ್ದರು.
ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಪ್ರಕರಣದಲ್ಲಿ ಅಶ್ಲೀಲ ವಿಡಿಯೊ ವೈರಲ್ ಮಾಡಿದ ಆರೋಪದಲ್ಲಿ ಬಂಧನವಾಗಿರುವ ನವೀನ್ ಗೌಡ ಹಾಗೂ ಚೇತನ್ನನ್ನು ಮೂರು ದಿನಗಳ ಕಾಲ ಎಸ್‌ಐಟಿ ಕಸ್ಟಡಿಗೆ ನೀಡಲಾಗಿದೆ. ಜೂನ್ 1 ರಂದು ಶನಿವಾರ ಸಂಜೆ 4.30ಕ್ಕೆ ಆರೋಪಿಗಳನ್ನು ಮತ್ತೆ ಕೋರ್ಟ್ಗೆ ಹಾಜರುಪಡಿಸಲು ಸೂಚಿಸಲಾಗಿದೆ. ಇಂದಿನಿಂದ ಜೂನ್ 1 ರವರೆಗೆ ನವೀನ್ ಹಾಗೂ ಚೇತನ್ ಎಸ್‌ಐಟಿ ಕಸ್ಟಡಿಗೆ ನೀಡಿ 2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ಸಿ ನ್ಯಾಯಾಲಯ ಆದೇಶ ನೀಡಿದೆ.
ಪೆನ್ ಡ್ರೈವ್ ಹಂಚಿಕೆ ಪ್ರಕರಣದ ಆರೋಪಿಗಳಾದ ಚೇತನ್, ನವೀನ್ ಗೌಡನನ್ನು ಎಸ್‌ಐಟಿ ಅಧಿಕಾರಿಗಳು ಮಂಗಳವಾರ ವಶಕ್ಕೆ ಪಡೆದಿದ್ದರು. ನಿರೀಕ್ಷಣಾ ಜಾಮೀನು ಅರ್ಜಿ ವಿಚಾರಣೆ ಇದ್ದ ಕಾರಣ ಹೈಕೋರ್ಟ್ಗೆ ಬಂದಿದ್ದ ಇಬ್ಬರನ್ನೂ ವಶಕ್ಕೆ ಪಡೆಯಲಾಗಿತ್ತು. ಹೈಕೋರ್ಟ್ನಿಂದ ಹೊರಗೆ ಬರುತ್ತಿದ್ದಂತೆ ಪಾರ್ಕಿಂಗ್ ಲಾಟ್ ಬಳಿ ಚೇತನ್, ನವೀನ್ ಗೌಡ ಸಿಕ್ಕಿಬಿದ್ದಿದ್ದರು.

-: ಬೇಕಾಗಿದ್ದಾರೆ :-
ಅಕ್ಷರ ಮಿತ್ರ ದಿನಪತ್ರಿಕೆ ಮತ್ತು ಕನ್ನಡ 9 ಸುದ್ದಿ ವಾಹಿನಿಗೆ ಜಿಲ್ಲೆ, ತಾಲ್ಲೂಕು, ಹೋಬಳಿಗಳಿಗೆ ವರದಿಗಾರರು ಬೇಕಾಗಿದ್ದಾರೆ.
9972776789, (ವಾಟ್ಸಾಪ್: 9620776789)

ಮತ ಎಣಿಕೆ ಅಭ್ಯರ್ಥಿಗಳೊಂದಿಗೆ ಡಿಸಿ ಸಭೆ

ಹಾಸನ: ಹಾಸನ ಲೋಕಸಭಾ ಕ್ಷೇತ್ರದ ಮತ ಎಣಿಕೆ ಜೂನ್ 4ರಂದು ನಡೆಯಲಿದ್ದು, ಈ ಪ್ರಯುಕ್ತ ಗುರುವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಭ್ಯರ್ಥಿಗಳೊಂದಿಗೆ ಸಭೆ ನಡೆಯಿತು.
ಜಿಲ್ಲಾಧಿಕಾರಿ ಸಿ.ಸತ್ಯಭಾಮಾ ಅವರು ಮಾತನಾಡಿ, ಮತ ಎಣಿಕೆ ಕೇಂದ್ರಕ್ಕೆ ಅಭ್ಯರ್ಥಿಗಳು, ಗುರುತಿನ ಚೀಟಿ ಹೊಂದಿರುವ ಏಜೆಂಟರಿಗೆ ಮಾತ್ರ ಪ್ರವೇಶ ನೀಡಲಾಗುವುದು. ಮೊಬೈಲ್, ಸ್ಮಾರ್ಟ್ ವಾಚ್ ಸೇರಿದಂತೆ ಡಿಜಿಟಲ್ ಸಾಧನಗಳನ್ನು ಕಡ್ಡಾಯವಾಗಿ ಎಣಿಕೆ ಕೇಂದ್ರದ ಒಳಗೆ ನಿರ್ಬಂಧಿಸಲಾಗಿದೆ. ಅಭ್ಯರ್ಥಿಗಳ ಏಜೆಂಟರು ನಿಗದಿತ ನಿಗದಿತ ಕೊಠಡಿ ಮಾಡಲಾಗಿದೆ. ಗುರುತಿನ ಚೀಟಿ ಬಿಟ್ಟು ಬೇರೆದೇ ತೆಳುವಂತಿಲ್ಲ ಎಂದು ತಿಳಿಸಿದರು.
ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಮಾತನಾಡಿ ವಿಜಯೋತ್ಸವ ನಡೆಸಲು ಅವಕಾಶವಿಲ್ಲ. ಮತ ಎಣಿಕೆ ಕೇಂದ್ರದ ವ್ಯಾಪ್ತಿಯಲ್ಲಿ ಪಾರ್ಕಿಂಗ್‌ಗೆ ನಿಗದಿತ ಸ್ಥಳ ವ್ಯವಸ್ಥೆ ಮಾಡಲಾಗಿದೆ. ಗುರುತಿನ ಚೀಟಿ ದುರುಪಯೋಗ ಕಂಡುಬಂದರೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.
ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಕೆ.ಟಿ. ಶಾಂತಲಾ, ಹಾಸನ ಲೋಕಸಭಾ ಕ್ಷೇತ್ರದ ವಿವಿಧ ಅಭ್ಯರ್ಥಿಗಳು ಉಪಸ್ಥಿತರಿದ್ದರು.

ಪರಿಶ್ರಮದಿಂದ ಮಾತ್ರ ಗೆಲುವು-ಪ್ರೊ.ತಾರಾನಾಥ್

ಹಾಸನ: ಪರಿಶ್ರಮದಿಂದ ವಿದ್ಯಾರ್ಥಿಗಳು ಅಭ್ಯಾಸ ನಡೆಸಿದರೆ ಮಾತ್ರ ಗೆಲುವು ನಿಮ್ಮ ಹಿಂಬಾಲಿಸುತ್ತದೆ. ಪ್ರತಿಯೊಬ್ಬರೂ ಸಹ ವರ್ತಮಾನವೇ ಭವಿಷ್ಯವನ್ನ ನಿರ್ಧರಿಸುತ್ತದೆ ಎಂಬ ಸತ್ಯವನ್ನ ಅರಿಯಬೇಕು ಎಂದು ಹಾಸನ ವಿಶ್ವವಿದ್ಯಾನಿಲಯ ಉಪ ಕುಲಪತಿ ಪ್ರೊ. ತಾರಾನಾಥ್ ಟಿ.ಸಿ. ಕಿವಿಮಾತು ಹೇಳಿದ್ದಾರೆ.
ನಗರದ ಸರ್ಕಾರಿ ಕಲಾ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 2023-24 ನೇ ಶಾಲಿನ ಸಹಪಠ್ಯ ಚಟುವಟಿಕೆಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿ ಅವರು, ಕಲಿಕೆಗೆ ಎನ್ನುವುದು ನಿಂತ ನೀರಲ್ಲ ಅದು ನಿರಂತರ. ಆದ್ದರಿಂದ ಮನಸ್ಸನ್ನು ನಿಯಂತ್ರಣದಲ್ಲಿಟ್ಟುಕೊಂಡು ನೀವು ಅಂದುಕೊಂಡ ಎಲ್ಲ ವಿಷಯಗಳನ್ನು ಕಾರ್ಯರೂಪಕ್ಕೆ ತರಲು ಪಯತ್ನಪಡಬೇಕು ಎಂದರು.
ಹಾಸನ ವಿಶ್ವವಿದ್ಯಾನಿಲಯ ಕುಲ ಸಚಿವರಾದ ಪ್ರೊ. ಪುಟ್ಟಸ್ವಾಮಿ ಮಾತನಾಡಿ, ಮಕ್ಕಳು ಪುಸ್ತಕದ ಹುಳುಗಳಾಗದೆ, ಮೊಬೈಲ್ ಬಳಕೆಗೆ ಹೆಚ್ಚು ಒತ್ತು ನೀಡದೆ ಪಠ್ಯೇತರ ಚಟುವಟಿಕೆಗಳಲ್ಲಿ ತಮ್ಮನ್ನ ತಾವು ಹೆಚ್ಚು ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.
ಪೋಷಕರ ತ್ಯಾಗ, ಗೌರವ, ಪ್ರೀತಿಗೆ ಎಂದು ಚ್ಯುತಿಬಾರದಂತೆ ಬದುಕು ಸಾಗಿಸುವಂತಾಗಬೇಕು ಎಂದರೆ ಶ್ರಮ ಅಗತ್ಯ ಎಂದರು.
ಕೌಶಲ್ಯ ಭರಿತ ಕೋರ್ಸ್‌ಗಳ ಅಭಿವೃದ್ಧಿಗಾಗಿ ಈ ಕಾಲೇಜಿಗೆ ಸದಾ ಬೆಂಬಲ ನೀಡಲಾಗುವುದು ಎಂದು ಭರವಸೆ ನೀಡಿದರು.
ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಡಾ. ಎಂ. ಬಿ. ಇರ್ಷಾದ್ ಅವರು ಮಾತನಾಡಿ, ಕಲಾ ಕಾಲೇಜು ತನ್ನದೇ ಆದ ರೀತಿಯಲ್ಲಿ ವೈಶಿಷ್ಟತೆಯನ್ನ ಒಳಗೊಂಡಿದೆ. ಈ ನಿಟ್ಟಿನಲ್ಲಿ ಕಾಲೇಜು ಶೈಕ್ಷಣಿಕ ಪ್ರಗತಿಗೆ ಹೊಸ ಕೋರ್ಸ್ ಅನ್ನು ಪರಿಚಯಿಸಿದ್ದು, ಮುಂದಿನ ದಿನಗಳಲ್ಲಿ ಸಂಶೋಧನಾ ಕೇಂದ್ರ ಪ್ರಾರಂಭಿಸಲು ಶ್ರಮಿಸಲಾಗುವುದು ಎಂದು ಹೇ ಕ್ಷಣಿಕ ಡೀನ್ ರಾಜು ಡಿ ಎಸ್, ಪರೀಕ್ಷಾ ನಿಯಂತ್ರಕ ಡಾ.ಮುರಳೀಧರ್ ಕೆ.ಡಿ., ಪತ್ರಾಂಕಿತ ವ್ಯವಸ್ಥಾಪಕ ಕೆ.ಟಿ. ಸತ್ಯಮೂರ್ತಿ, ಯುವ ರೆಡ್ ಕ್ರಾಸ್ ಘಟಕ ದೇವರಾಜ ಹೆಚ್.ಡಿ., ಸಾಂಸ್ಕೃತಿಕ ವೇದಿಕೆ ಸಂಚಾಲಕ ಡಾ.ಶ್ರೀನಿವಾಸ ಬಿ.ಹೆಚ್, ರಾ.ಸೆ.ಯೋ. ಕಾರ್ಯಕ್ರಮಾಧಿಕಾರಿ (ಘಟಕ-1) ಡಾ.ಪಾರ್ಥೇಶ್ ಕೆ.ವಿ, ದೈಹಿಕ ಶಿಕ್ಷಣ ನಿರ್ದೇಶಕ ಪವನ್ ಜೆ.ಕೆ, ಸ್ಕೌಟ್ಸ್ ಅಂಡ್ ಗೈಡ್ಸ್ ಡಾ.ಸುರೇಶ್ ಸಿ ಮತ್ತು ಪ್ರಮೀಳಾ, ಎನ್.ಸಿ.ಸಿ. ಅಧಿಕಾರಿ ಕ್ಯಾಪ್ಟನ್ ಶ್ರೀನಿವಾಸ್ ಎನ್ ವಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ರಸ್ತೆಯಲ್ಲಿ ನಮಾಜ್ : ಪ್ರಕರಣ ದಾಖಲಿಸಿದ ಇನ್ಸ್‌ಪೆಕ್ಟರ್‌ಗೆ ಕಡ್ಡಾಯ ರಜೆಯ ಶಿಕ್ಷೆ

ಮಂಗಳೂರು: ಇಲ್ಲಿನ ರಸ್ತೆಯಲ್ಲಿ ಕೆಲ ಯುವಕರು ನಮಾಜ್ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಮೊಟೋ ಕೇಸ್ ದಾಖಲಿಸಿದ್ದಕ್ಕಾಗಿ ಪೊಲೀಸ್ ಇನ್ಸ್ಪೆಕ್ಟರ್‌ಗೆ ಕಡ್ಡಾಯ ರಜೆಯ ಶಿಕ್ಷೆ ನೀಡಲಾಗಿದೆ.
ಮಂಗಳೂರು ನಗರ ಪೊಲೀಸ್ ಆಯುಕ್ತ ಅನುಪಮ್ ಅಗರ್ವಾಲ್ ಆದೇಶ ಹೊರಡಿಸಿದ್ದು, ಬಿ ರಿಪೋರ್ಟ್ ಮಾಡಿ ಕೇಸ್ ರದ್ದು ಮಾಡಿದ್ದಾರೆ. ಕೇಸ್ ದಾಖಲಿಸಿದ್ದಕ್ಕೆ ಮುಸ್ಲಿಮರ ಆಕ್ಷೇಪ ಹಿನ್ನೆಲೆ ಕದ್ರಿ ಪಿಐ ಸೋಮಶೇಖರ್‌ಗೆ ಕಡ್ಡಾಯ ರಜೆ ಶಿಕ್ಷೆ ನೀಡಲಾಗಿದೆ. ಪೊಲೀಸರ ವಿರುದ್ಧ ತನಿಖೆ ಮಾಡಲು ಎಸಿಪಿ ದರ್ಜೆಯ ಅಧಿಕಾರಿಯನ್ನು ನೇಮಕ ಮಾಡಲಾಗಿದೆ.
ಮಂಗಳೂರಿನ ಕಂಕನಾಡಿಯ ಮಸೀದಿ ಬಳಿಯ ರಸ್ತೆಯಲ್ಲಿ ಮೇ. 24ರಂದು ಕೆಲ ಅನ್ಯಕೋಮಿನ ಯುವಕರು ನಮಾಜ್ ಮಾಡಿದ್ದರು. ಇದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾದ ಹಿನ್ನೆಲೆ ಕದ್ರಿ ಪೊಲೀಸರು ಸ್ವಯಂ ಪ್ರೇರಿತ ಪ್ರಕರಣ (ಸುಮೊಟೋ) ದಾಖಲಿಸಿಕೊಂಡಿದ್ದರು. ಐಪಿಸಿ ಸೆಕ್ಷನ್ 341 (ಅಕ್ರಮ ಪ್ರತಿಬಂಧಕ್ಕಾಗಿ ದಂಡನೆ), 283 (ಸಾರ್ವಜನಿಕ ರಸ್ತೆಯಲ್ಲಿ ಅಡ್ಡಿ) ,143 (ವಿಧಿವಿರುದ್ಧ ಕೂಟದ ಸದಸ್ಯ) 149 (ಏಕೋದ್ದೇಶವನ್ನು ಈಡೇರಿಸುವಲ್ಲಿ ಮಾಡಲಾದ ಅಪರಾಧದ ಬಗ್ಗೆ ವಿಧಿವಿರುದ್ಧ ಕೂಟದ ಪ್ರತಿಯೊಬ್ಬ ಸದಸ್ಯನು ತಪ್ಪಿತಸ್ಥನಾಗಿರುವುದು) ಅಡಿಯಲ್ಲಿ ಪ್ರಕರಣ ದಾಖಲಿಸಿದ್ದರು. ಇದಕ್ಕೆ ಕರಾವಳಿಯ ಕಾಂಗ್ರೆಸ್ ಅಲ್ಪಸಂಖ್ಯಾತರು, ಮುಸ್ಲಿಂ ವಲಯ ಮತ್ತು ಪ್ರಗತಿಪರರಿಂದ ತೀವ್ರ ಆಕ್ರೋಶ ವ್ಯಕ್ತವಾಗಿತ್ತು. ಇಂದರಿಂದ ಎಚ್ಚೆತ್ತ ಪೊಲೀಸ್ ಇಲಾಖೆ ನ್ಯಾಯಯುತ ಕರ್ತವ್ಯ ನಿರ್ವಹಿಸಿದ ಪೊಲೀಸ್ ಅಧಿಕಾರಿಗೆ ಕಡ್ಡಾಯ ರಜೆ ಶಿಕ್ಷೆ ವಿಧಿಸಿದೆ.

ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸಹಪಠ್ಯ ಚಟುವಟಿಕೆಗಳ ಸಮಾರೋಪ ಸಮಾರಂಭದಲ್ಲಿ ಎ.ಮಂಜು ಹೇಳಿಕೆ

ವಿದ್ಯೆಯಿಂದ ಮಾತ್ರ ಸಮಾಜದ ಬದಲಾವಣೆ

ಕೊಣನೂರು: ವಿದ್ಯೆಯಿಂದ ಮಾತ್ರ ಸಮಾಜದ ಬದಲಾವಣೆ ಸಾಧ್ಯ. ಹಾಗಾಗಿ ನಾವು ಬದಲಾಗುತ್ತವೆಯೇ ಹೊರತು ಸಮಾಜ ಬದಲಾಗುವುದಿಲ್ಲ ಎಂದು ಶಾಸಕ ಎ.ಮಂಜು ಹೇಳಿದರು.
ಇಲ್ಲಿನ ಬಿ.ಎಂ.ಶೆಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸಹಪಠ್ಯ ಚಟುವಟಿಕೆಗಳ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.
ಜೀವನದಲ್ಲಿ ಆದು ಹೋದವರನ್ನು ನೆನೆಸಿ ಕೊಳ್ಳಬೇಕು. ನಮಗೆ ಯಾರು ಸಹಾಯ ಮಾಡಿರುತ್ತಾರೋ ಅವರೇ ದೇವರು. ಹೀಗಾಗಿ ನಮಗೆ ಸಹಾಯ ಮಾಡಿದವರನ್ನು, ನಮ್ಮನ್ನು ತಿದ್ದಿದವರನ್ನು ದೇವರು ಎಂದು ತಿಳಿದು ಅವರಿಗೆ ಗೌರವವನ್ನು ಕೊಡಬೇಕು. ಹುಟ್ಟು ಆಕಸ್ಮಿಕ, ಸಾವು ಖಚಿತ ಇವೆರಡರ ಮಧ್ಯೆ ನಾವೇನನ್ನು ಸಾಧಿಸುತ್ತೇವೋ ಅದು ಮಾತ್ರ ಉಳಿಯುತ್ತದೆ. ಹಾಗಾಗಿ ನಾವು ಶಾಶ್ವತವಾಗಿ ಉಳಿಯುವಂತಹದ್ದನ್ನು ಮಾಡಬೇಕು. ಈ ಭಾಗದ ಜನರಿಗೆ ವಿದ್ಯೆ ದೊರಕಲೆಂದು ಇಲ್ಲಿ ಕಾಲೇಜನ್ನು ತೆರೆದ ಬಿ.ಎಂ.ಶೆಟ್ಟಿ ವಂಶಸ್ಥರಿಗೆ ನಾನು ನಿಮ್ಮೆಲ್ಲರ ಪರವಾಗಿ ಕೃತಜ್ಞತೆಯನ್ನು ಹೇಳುತ್ತೇನೆ. ಆ ವಂಶಸ್ಥರು ಎಲ್ಲರಿಗೂ ವಿದ್ಯೆ ಸಿಗಲಿ ಎಂಬ ಕಲ್ಪನೆ ಹಾಗೂ ದೂರದೃಷ್ಟಿಯಿಂದ ತೆರೆದ ಕಾಲೇಜು ಇಂದು ಹೆಮ್ಮರವಾಗಿ ಬೆಳೆದು ಅವರ ಕನಸನ್ನು ಸಾಕಾರಗೊಳಿಸಿದೆ. ವಿದ್ಯಾರ್ಥಿಗಳು ಸಮಾಜಕ್ಕೆ ಉತ್ತಮ ಕೊಡುಗೆಗಳನ್ನು ನೀಡುವ ಮೂಲಕ ಜೀವನವನ್ನು ಸಾರ್ಥಕಗೊಳಿಸಿಕೊಳ್ಳಬೇಕು ಎಂದರು.
ಮೈಸೂರು ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ವಿಶ್ರಾಂತ ಪ್ರಾಧ್ಯಾಪಕರಾದ ಪ್ರೊ. ಕೆ.ಸಿ. ಬಸವರಾಜು ರವರು ಸಮಾರೋಪ ಭಾಷಣ ಮಾಡುತ್ತಾ, ಐನ್ಸ್ಟೀನ್ ಕಂಡುಹಿಡಿದ ಸೂತ್ರದಿಂದ ಅಣುಬಾಂಬ್ ಸಂಶೋಧನೆಗೊಂಡು ವಿಶ್ವಯುದ್ದಗಳಿಗೆ ಕಾರಣವಾಯಿತು. ಗಾಂಧೀಜಿಯವರ ಸತ್ಯ ಮತ್ತು ಅಹಿಂಸೆ ಭಾರತದ ಸ್ವಾತಂತ್ರ್ಯಕ್ಕೆ ಕಾರಣವಾಯಿತು. ಆದ್ದರಿಂದ ಸತ್ಯ ನಮ್ಮ ಬದುಕಿನ ಭಾಗವಾಗಬೇಕು. ಶಿಕ್ಷಣದಿಂದ ಪಡೆದ ಜ್ಞಾನವನ್ನು ಮಾನವತೆಯ ಉದ್ದಾರಕ್ಕಾಗಿ ಬಳಸಬೇಕು ಎಂದರು.
ಸಿಡಿಸಿ ಉಪಾಧ್ಯಕ್ಷ ಎಸ್. ಸಿ.ಚೌಡೇಗೌಡ, ಪ್ರಾಂಶುಪಾಲ ಎಂ. ಮಹೇಶ್ ಮುಂತಾದವರು ಮಾತನಾಡಿ ಅಂತಿಮ ಬಿ, ಬಿಕಾಂ ವಿದ್ಯಾರ್ಥಿಗಳಿಗೆ ಶುಭಹಾರೈಸಿದರು.
ಇದೇ ಸಂದರ್ಭದಲ್ಲಿ 2023-234 ನೇ ಸಾಲಿನ 1, 3 ಹಾಗೂ 5 ನೇ ಸೆಮಿಸ್ಟರ್ ನಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು ಕ್ರೀಡೆ, ಸ್ಕೌಟ್ ಮತ್ತು ಗೈಡ್ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.
ಕಾರ್ಯಕ್ರಮದಲ್ಲಿ ಗ್ರಾ.ಪಂ ಅಧ್ಯಕ್ಷ ಮಿಜ್ಬಾ ರಿಜ್ವಾನ್, ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರುಗಳಾದ ಕೆ.ಎಸ್. ವಾಸುದೇವ್, ಪುಟ್ಟಸ್ವಾಮಿಗೌಡ, ನಂಜುಂಡೇಗೌಡ, ಕುಮಾರಸ್ವಾಮಿ, ಕೆ.ವಿ. ಸತೀಶ್, ಭೋಧಕ ಮತ್ತು ಭೋಧಕೇತರ ವರ್ಗದವರು, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

CELEBRATING 20 Years

ವೈದ್ಯ ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜು

Recognized by INC (New Delhi), KSNC, KSDNEB, Paramedical Board & Govt Of Karnataka
ಬಿ.ಎಂ. ರಸ್ತೆ, ಸರ್ಕಾರಿ ಆಸ್ಪತ್ರೆ ಪಕ್ಕ, ಚನ್ನರಾಯಪಟ್ಟಣ - 573116, ಹಾಸನ ಜಿಲ್ಲೆ

ADMISSIONS OPEN
9740239936, 9980449936

ಡಿಪ್ಲೋಮೊ ನರ್ಸಿಂಗ್ (GNM)	ವಿದ್ಯಾರ್ಹತೆ ಪಿ.ಯು.ಸಿ ಉತ್ತೀರ್ಣರಾಗಿರಬೇಕು (ಆರ್ಟ್ಸ್, ಸೈನ್ಸ್, ಕಾಮರ್ಸ್)	3 ವರ್ಷಗಳು
ಡಿಪ್ಲೋಮೊ ಲ್ಯಾಬ್ ಟೆಕ್ನಿಷಿಯನ್ (DMLT)	ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಉತ್ತೀರ್ಣ ಪಿ.ಯು.ಸಿ (ಸೈನ್ಸ್) ಉತ್ತೀರ್ಣ	3 ವರ್ಷಗಳು 2 ವರ್ಷಗಳು
ಡಿಪ್ಲೋಮೊ ಹೆಲ್ತ್ ಇನ್ಸ್‌ಪೆಕ್ಟರ್ (DHI)	ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಉತ್ತೀರ್ಣ ಪಿ.ಯು.ಸಿ (ಸೈನ್ಸ್) ಉತ್ತೀರ್ಣ	3 ವರ್ಷಗಳು 2 ವರ್ಷಗಳು
ಡಿಪ್ಲೋಮೊ ಆಪರೇಷನ್ ಥಿಯೇಟರ್ & ಅನಸ್ತೇಶಿಯಾ ಟೆಕ್ನಾಲಜಿ (DOT & AT)	ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಉತ್ತೀರ್ಣ ಪಿ.ಯು.ಸಿ (ಸೈನ್ಸ್) ಉತ್ತೀರ್ಣ	3 ವರ್ಷಗಳು 2 ವರ್ಷಗಳು
ಡಿಪ್ಲೋಮೊ ಮೆಡಿಕಲ್ ಇಮೇಜಿಂಗ್ ಟೆಕ್ನಾಲಜಿ (DMIT)	ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಉತ್ತೀರ್ಣ ಪಿ.ಯು.ಸಿ (ಸೈನ್ಸ್) ಉತ್ತೀರ್ಣ	3 ವರ್ಷಗಳು 2 ವರ್ಷಗಳು

ಎಲ್ಲಾ ವಿದ್ಯಾರ್ಥಿಗಳಿಗೂ ಸ್ಕಾಲರ್‌ಶಿಪ್ ಮತ್ತು ಹಾಸ್ಟೇಲ್ ವ್ಯವಸ್ಥೆ ಇರುತ್ತದೆ.

31.05.2024ರ ರಾಶಿ ಭವಿಷ್ಯ

ಶ್ರೀ ರೇಣುಕಾ ಗುರೂಜೀ
ದೂ.9380077037

ಮೇಷ: ಬಣ್ಣದ ಮಾತುಗಳನ್ನು ನಂಬಿ ಇಂದು ಯಾವುದೇ ಹೂಡಿಕೆ ವ್ಯವಹಾರಗಳಲ್ಲಿ ತೊಡಗುವುದು ಬೇಡ. ಇಂದು ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ಆಪ್ತರಿಗೆ ನಿಮ್ಮ ಮಾತುಗಳು ಬೇಸರ ತರಿಸಬಹುದು. ಅನಾವಶ್ಯಕ ವಾದದಲ್ಲಿ ಸಿಲುಕಿಕೊಳ್ಳುವ ಸಾಧ್ಯತೆ ಇದೆ, ಹೀಗಾಗಿ ಎಚ್ಚರಿಕೆ ಇರಲಿ. ದಿಢೀರ್ ಪ್ರಯಾಣ ಸಾಧ್ಯತೆಗಳು ಇದ್ದು, ಉದ್ಯೋಗಿಗಳಿಗೆ ಶುಭ ಫಲ. ಕೌಟುಂಬಿಕವಾಗಿ ಶುಭ ಫಲ. ಅದೃಷ್ಟ ಸಂಖ್ಯೆ: 5 ದಿಕ್ಕು: ಉತ್ತರ,ಬಣ್ಣ ನೇರಳೆಬಣ್ಣ

ವೃಷಭ: ಹಾಸ್ಯಪ್ರಜ್ಞೆಯ ನಡವಳಿಕೆಯಿಂದಾಗಿ ಇತರರನ್ನು ಚುಂಬಕದಂತೆ ಆಕರ್ಷಿಸಿ ಕೆಲಸ ಕಾರ್ಯಗಳನ್ನು ಯಶಸ್ವಿಯಾಗಿ ಪೂರೈಸಿಕೊಳ್ಳುವಿರಿ. ಭೂ ಹಾಗೂ ಹೂಡಿಕೆ ವ್ಯವಹಾರಗಳಲ್ಲಿ ದಿನದ ಮಟ್ಟಿಗೆ ತೊಡಗುವುದು ಬೇಡ. ಇದರಿಂದ ಆರ್ಥಿಕವಾಗಿ ಬಳಲುವ ಸಾಧ್ಯತೆ. ಆರೋಗ್ಯ ಪರಿಪೂರ್ಣ. ಉದ್ಯೋಗಿಗಳಿಗೆ ಮಿಶ್ರ ಫಲ. ಕೌಟುಂಬಿಕವಾಗಿ ಶುಭ ಫಲ. ಅದೃಷ್ಟ ಸಂಖ್ಯೆ: 4

ಮಿಥುನ: ಉತ್ಸಾಹ ತುಂಬಿದ ವಾತಾವರಣ. ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ಅನಾವಶ್ಯಕ ಖರ್ಚು ಮಾಡಿ ನಂತರ ದುಃಖಿಸುವುದು ಬೇಡ. ನಿಮಗೆ ಕುಟುಂಬದ ಯಜಮಾನನ ಬೆಂಬಲ ಸಿಗಲಿದೆ. ಆರೋಗ್ಯ ಪರಿಪೂರ್ಣ. ಉದ್ಯೋಗಿಗಳಿಗೆ ಒತ್ತಡ.ಕೌಟುಂಬಿಕವಾಗಿ ಶುಭ ಫಲ. ಅದೃಷ್ಟ ಸಂಖ್ಯೆ: 2

ಕಟಕ: ನೀವು ಇತರರನ್ನು ಶ್ಲಾಘಿಸುವ ಮೂಲಕ ಯಶಸ್ಸನ್ನು ಆನಂದಿಸುವ ಸಾಧ್ಯತೆ ಇದೆ. ವ್ಯಾಪಾರ ಹಾಗೂ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ. ಗೌಪ್ಯ ವಿಷಯಗಳನ್ನು ಇತರರೊಂದಿಗೆ ಹಂಚಿಕೊಳ್ಳುವ ಮುನ್ನ ಎಚ್ಚರವಿರಲಿ. ಆರ್ಥಿಕವಾಗಿ ಪ್ರಗತಿ. ಪ್ರೇಮಿಗಳಿಗೆ ಶುಭ ಸುದ್ದಿ ಸಿಗಲಿದೆ. ಕೌಟುಂಬಿಕವಾಗಿ ಶುಭ ಫಲ.

ಸಿಂಹ: ಆತ್ಮವಿಶ್ವಾಸತೆಯಿಂದ ಕೆಲಸ ಕಾರ್ಯಗಳಲ್ಲಿ ಪ್ರಗತಿ. ಆಪ್ತರೊಂದಿಗೆ ವಾದಕ್ಕಿಳಿಯುವ ಸಾಧ್ಯತೆ ಇದ್ದು, ಆದಷ್ಟು ಮಾತಿನಲ್ಲಿ ಹಿಡಿತವಿರಲಿ. ವಿದ್ಯಾರ್ಥಿಗಳು ಉಜ್ವಲ ಭವಿಷ್ಯಕ್ಕಾಗಿ ಮನೋರಂಜನೆಗೆ ಕಡಿವಾಣ ಹಾಕುವುದು ಉತ್ತಮ. ಆರೋಗ್ಯ ಪರಿಪೂರ್ಣ, ಅನಿವಾರ್ಯ ಕಾರಣಗಳಿಂದ ಖರ್ಚು. ಕೌಟುಂಬಿಕವಾಗಿ ಶುಭಫಲ. ಅದೃಷ್ಟ ಸಂಖ್ಯೆ: 4

ಕನ್ಯಾ: ಸಕಾರಾತ್ಮಕ ಆಲೋಚನೆಗಳು ನಿಮಗೆ ಪುಷ್ಟಿ ನೀಡಲಿವೆ. ಸೃಜನಶೀಲ ಕ್ಷೇತ್ರಗಳಲ್ಲಿರುವವರು ಬಹಳ ದಿನಗಳಿಂದ ಕಾಯುತ್ತಿದ್ದ ಪ್ರಸಿದ್ಧಿ ಮತ್ತು ಗುರುತಿಸುವಿಕೆಯನ್ನು ಪಡೆಯುವ ಒಂದು ಯಶಸ್ವಿ ದಿನ. ವಿವಾಹ ಅಪೇಕ್ಷಿತರಿಗೆ ಶುಭ ಸೂಚನೆ ಸಿಗಲಿದೆ. ಆರೋಗ್ಯ ಪರಿಪೂರ್ಣ. ಆರ್ಥಿಕವಾಗಿ ಸದೃಢ. ಕೌಟುಂಬಿಕವಾಗಿ ಶುಭಫಲ. ಅದೃಷ್ಟ ಸಂಖ್ಯೆ: 2

ತುಲಾ: ಅತಿಯಾದ ಒತ್ತಡದಿಂದ ಮಾನಸಿಕವಾಗಿ ಹಾಗೂ ದೈಹಿಕವಾಗಿ ಬಳಲುವ ಸಾಧ್ಯತೆ. ಜೀವನದ ಪ್ರಮುಖ ನಿರ್ಧಾರಗಳ ಕುರಿತು ನೀವು ಕುಟುಂಬದೊಂದಿಗೆ ಚರ್ಚಿಸುವ ಸಾಧ್ಯತೆ. ಆರೋಗ್ಯದ ಕುರಿತು ಕಾಳಜಿ ಇರಲಿ. ಉದ್ಯೋಗಿಗಳಿಗೆ ಯಶಸ್ಸು ಸಿಗಲಿದೆ. ಕೌಟುಂಬಿಕವಾಗಿ ಶುಭಫಲ. ಅದೃಷ್ಟ ಸಂಖ್ಯೆ: 5

ವೃಶ್ಚಿಕ: ಹಳೆಯ ಸ್ನೇಹಿತರೊಂದಿಗೆ ಆತ್ಮೀಯ ಮಾತುಕತೆ. ಭವಿಷ್ಯದ ಜೀವನಕ್ಕಾಗಿ ಹೂಡಿಕೆ ಕುರಿತು ಆಲೋಚನೆ ಇರಲಿದ್ದು, ಸಂಗಾತಿಯಿಂದ ಸಲಹೆ ಪಡೆಯುವ ಸಾಧ್ಯತೆ ಇದೆ. ಆರೋಗ್ಯ ಪರಿಪೂರ್ಣ. ಆರ್ಥಿಕವಾಗಿ ಸಾಧಾರಣ ಪ್ರಗತಿ ಇರಲಿದ್ದು, ಕೌಟುಂಬಿಕವಾಗಿ ಶುಭ ಫಲ. ಅದೃಷ್ಟ ಸಂಖ್ಯೆ: 7

ಧನಸ್ಸು: ಅನೇಕ ದಿನಗಳಿಂದ ನನೆಗುದಿಗೆ ಬಿದ್ದಿರುವ ಕೋರ್ಟ್, ಕಚೇರಿ ವ್ಯಾಜ್ಯಗಳು ವಿಜಯವನ್ನು ತಂದು ಕೊಡಲಿವೆ. ದಿನದ ಕೊನೆಯಲ್ಲಿ ಯಾವುದಾದರೂ ಕಾರಣದಿಂದ ಒತ್ತಡಕ್ಕೆ ಒಳಗಾಗುವ ಸಾಧ್ಯತೆ ಇದೆ. ಆರೋಗ್ಯ ಪರಿಪೂರ್ಣ, ಆರ್ಥಿಕವಾಗಿ ಪ್ರಗತಿ. ಉದ್ಯೋಗಿಗಳಿಗೆ ಮಿಶ್ರಫಲ. ಕೌಟುಂಬಿಕವಾಗಿ ಶುಭ ಫಲ. ಅದೃಷ್ಟ ಸಂಖ್ಯೆ: 4

ಮಕರ: ಆರೋಗ್ಯ ಪರಿಪೂರ್ಣವಾಗಿರುತ್ತದೆ. ಯಾವುದೋ ಮೂಲದಿಂದ ಆರ್ಥಿಕವಾಗಿ ಬಲಗೊಳ್ಳಲಿದ್ದೀರಿ. ಕುಟುಂಬದ ಸದಸ್ಯರ ಅಪಸ್ವರದಿಂದಾಗಿ ಮಾನಸಿಕವಾಗಿ ಒತ್ತಡಕ್ಕೆ ಒಳಗಾಗುವ ಸಾಧ್ಯತೆ. ಮಾತಿಗೆ ವಿರಾಮ ನೀಡುವುದು ಉತ್ತಮ. ಉದ್ಯೋಗಿಗಳಿಗೆ ಪ್ರೋತ್ಸಾಹ ಸಿಗಲಿದೆ. ಕೌಟುಂಬಿಕವಾಗಿ ಸಾಧಾರಣ ಫಲ. ಅದೃಷ್ಟ ಸಂಖ್ಯೆ: 4

ಕುಂಭ: ನಿಮ್ಮ ಕೋಪದ ಮನಸ್ಥಿತಿ ಇತರರ ಮೇಲೆ ಪ್ರಭಾವ ಬೀರಬಹುದು. ಅನಿವಾರ್ಯ ಕಾರಣಗಳಿಂದ ಸ್ನೇಹಿತರ ಸಹಾಯ ಬೇಡುವ ಸಾಧ್ಯತೆ. ನಿಮ್ಮ ಕೆಲಸದ ಮೇಲೆ ಗಮನ ಹರಿಸಿದಲ್ಲಿ ಯಶಸ್ಸು ಮತ್ತು ಮನ್ನಣೆ ನಿಮ್ಮದಾಗುತ್ತದೆ. ಆರೋಗ್ಯದ ಕುರಿತು ಕಾಳಜಿ ಇರಲಿ. ಆರ್ಥಿಕವಾಗಿ ಪ್ರಗತಿ ಹೊಂದಲಿದ್ದೀರಿ. ಉದ್ಯೋಗಿಗಳಿಗೆ ಸಾಧಾರಣ ಫಲ. ಕೌಟುಂಬಿಕವಾಗಿ ಶುಭ ಫಲ. ಅದೃಷ್ಟ ಸಂಖ್ಯೆ: 1

ಮೀನ: ಅನಿವಾರ್ಯ ಕಾರಣಗಳಿಂದ ಕುಟುಂಬದ ಸದಸ್ಯರೊಂದಿಗೆ ಮನಸ್ತಾಪ, ಆದಾಗ್ಯೂ ನೀವು ನಿಮ್ಮ ಶಾಂತ ಸ್ವಭಾವದಿಂದ ಎಲ್ಲವನ್ನು ಸರಿಗೊಳಿಸಬಹುದು. ಆರೋಗ್ಯ ಪರಿಪೂರ್ಣವಾಗಿರಲಿದ್ದು, ಆರ್ಥಿಕ ಪ್ರಗತಿ ಸಾಧಾರಣವಾಗಿರಲಿದೆ. ಇನ್ನು ಉದ್ಯೋಗಿಗಳಿಗೆ ಹೆಚ್ಚಿನ ಒತ್ತಡ ಇರಲಿದೆ. ಶುಭಫಲದೊಂದಿಗೆ ಅದೃಷ್ಟ ಸಂಖ್ಯೆ: 8

(ಗಮನಿಸಿ: ಜ್ಯೋತಿಷ್ಯ ಎನ್ನುವುದು ನಂಬಿಕೆಯ ಮಾತು. ಓದುಗರ ನಂಬಿಕೆಯನ್ನು ಅಕ್ಷರಮಿತ್ರ ದಿನಪತ್ರಿಕೆ ಗೌರವಿಸುತ್ತದೆ. ಇಲ್ಲಿರುವ ಯಾವುದೇ ಶಿಫಾರಸು ಅಥವಾ ಸಲಹೆಗಳನ್ನು ಪಾಲಿಸುವುದು ಓದುಗರ ವಿವೇಚನೆ, ನಂಬಿಕೆಗೆ ಬಿಟ್ಟ ವಿಷಯವಾಗಿರುತ್ತದೆ)

ಪಾಲಿಟೆಕ್ನಿಕ್ ಕೋರ್ಸ್ ಅವಧಿ ವಿಸ್ತರಣೆ

ಹಾಸನ: ಶ್ರೀಮತಿ ಎಲ್ ವಿ ಸರ್ಕಾರಿ ಪಾಲಿಟೆಕ್ನಿಕ್ನಲ್ಲಿ ಸಿವಿಲ್, ಕಂಪ್ಯೂಟರ್ ಸೈನ್ಸ್, ವಿದ್ಯುತ್, ಮೆಕ್ಯಾನಿಕಲ್, ಆಟೋಮೊಬೈಲ್ ಹಾಗೂ ವಿಭಾಗಗಳ ಖಾಲಿ ಉಳಿದಿರುವ ಸೀಟುಗಳಿಗೆ ಪ್ರಥಮ ವರ್ಷದ ಡಿಪ್ಲೊಮಾ ಆಫ್ಲೈನ್ ಮುಖಾಂತರ ಮೆರಿಟ್ ಆಧಾರಿತ ಪ್ರವೇಶಕ್ಕೆ ಅರ್ಜಿ ಸಲ್ಲಿಸುವ ದಿನಾಂಕವನ್ನು ಮುಂದೂಡಲಾಗಿದ್ದು ಆಸಕ್ತ ವಿದ್ಯಾರ್ಥಿಗಳು ಮೇ 30 ರಿಂದ ಜೂನ್ 04 ರವರೆಗೆ ಅರ್ಜಿ ಸಲ್ಲಿಸಬಹುದಾಗಿದ್ದು, ಜೂ.05 ರಿಂದ 06 ರವರೆಗೆ ಮೆರಿಟ್ ಆಧಾರದಲ್ಲಿ ಪ್ರವೇಶಾತಿ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ: 9901942150, 8217700892, 9448772224, ಸಂಪರ್ಕಿಸಬಹುದಾಗಿದೆ ಎಂದು ಸಂಸ್ಥೆಯ ಪ್ರಾಂಶುಪಾಲೆ ವೀಣಾ ಎಸ್.ಬಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಜಾಲಿ ಮೂಡ್ ಗೆ ಜಾರಿದ ಹೆಚ್.ಡಿ.ಕುಮಾರಸ್ವಾಮಿ ಕುಟುಂಬ

ಬೆಂಗಳೂರು: ಲೋಕಸಭಾ ಚುನಾವಣೆ ಹಾಗೂ ವಿಧಾನ ಪರಿಷತ್ ಚುನಾವಣಾ ಪ್ರಚಾರದ ಬಳಲಿಕೆ ಮತ್ತು ಪ್ರಜ್ವಲ್ ರೇವಣ್ಣ ಪ್ರಕಣದಿಂದಾಗಿ ಮಾನಸಿಕ ಒತ್ತಡಕ್ಕೆ ಸಿಲುಕಿದ್ದ ಮಾಜಿ ಸಿಎಂ ಹೆಚ್. ಡಿ ಕುಮಾರಸ್ವಾಮಿ ಇದೀಗ ಮೈಂಡ್ ರಿಲೀಫ್ ಗಾಗಿ ರೆಸಾರ್ಟ್ ಮೊರೆ ಹೋಗಿದ್ದಾರೆ. ಕುಟುಂಬ ಸಮೇತರಾಗಿ ಪ್ರಕೃತಿ ಮಡಿಲಿನಲ್ಲಿ ಫುಲ್ ರಿಲ್ಯಾಕ್ಸ್ ಮೂಡ್‌ಗೆ ಜಾರಿದ್ದಾರೆ.

ಇತ್ತೀಚೆಗಷ್ಟೇ ಹೃದಯದ ಚಿಕಿತ್ಸೆಗೆ ಒಳಗಾಗಿ ಚೇತರಿಸಿಕೊಂಡು ಕಳೆದ ಎರಡು ತಿಂಗಳಿ ನಿಂದ ಲೋಕಸಭಾ ಚುನಾವಣಾ ಪ್ರಚಾರ ಕಾರ್ಯದಲ್ಲಿದ್ದ ಮಾಜಿ ಸಿಎಂ ಹೆಚ್. ಡಿ ಕುಮಾರಸ್ವಾಮಿ ಸಾಕಷ್ಟು ಆಯಾಸಗೊಂಡಿದ್ದರು. ಹೀಗಿದ್ದರೂ ವಿಶ್ರಾಂತಿಗೆ ಸಮಯ ಸಿಗದಂತೆ ಪರಿಷತ್ ಚುನಾವಣೆ ಎದುರಾಯಿತು. ಶಿಕ್ಷಕರ ಮತ್ತು ಪದವೀಧರ ಕ್ಷೇತ್ರಗಳ ಚುನಾವಣಾ ಪ್ರಚಾರದ ಮೂಲಕ ಮೈತ್ರಿ ಧರ್ಮ ಪಾಲನೆ ಮಾಡಬೇಕಾದ ಅನಿವಾರ್ಯತೆಯಿಂದ ವಿಶ್ರಾಂತಿ ಬದಲು ಪ್ರಚಾರ ಕಾರ್ಯದಲ್ಲಿ ಭಾಗಿಯಾಗಿದ್ದರು. ಅದರ ನಡುವೆ ಪ್ರಜ್ವಲ್ ರೇವಣ್ಣ ಪ್ರಕರಣದಿಂದಾಗಿ ಮಾನಸಿಕ ಒತ್ತಡಕ್ಕೂ ಒಳಗಾಗಿದ್ದರು.
ಪತ್ನಿ ಅನಿತಾ ಕುಮಾರಸ್ವಾಮಿ, ಪುತ್ರ ನಿಖಿಲ್ ಕುಮಾರಸ್ವಾಮಿ, ಸೊಸೆ ರೇವತಿ ಹಾಗೂ ಮೊಮ್ಮಗ ಚಿ. ಅವ್ಯಾನ್ ದೇವ್ ಜತೆ ರೆಸಾರ್ಟ್‌ನ ಪ್ರಕೃತಿ ಮಡಿಲಿನಲ್ಲಿ ಕಾಲ ಕಳೆಯು ತ್ತಿದ್ದಾರೆ. ಎಲ್ಲಿಯೇ ಹೋದರೂ ಸ್ಥಳೀಯರ ಅಹವಾಲು ಆಲಿಸುವುದನ್ನು ರೂಢಿಸಿಕೊಂಡಿರುವ ಕುಮಾರಸ್ವಾಮಿ ಮರೆಯಲಿಲ್ಲ ಎನ್ನುವುದು ವಿಶೇಷ.

ರಾಜ್ಯದ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿನ ಅವ್ಯವಹಾರ ಪ್ರಕರಣ

ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣ-ಸಚಿವ ನಾಗೇಂದ್ರಗೆ ಸಮನ್ಸ್

ಬೆಂಗಳೂರು: ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಹಣವನ್ನು ಅಕ್ರಮವಾಗಿ ವರ್ಗಾವಣೆ ಮಾಡಿರುವ ಪ್ರಕರಣದಲ್ಲಿ ಯಾರೇ ತಪ್ಪು ಮಾಡಿದ್ದರೂ, ಅವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು. ಯಾವುದೇ ಕಾರಣಕ್ಕೂ ತಪ್ಪಿತಸ್ಥರ ರಕ್ಷಣೆ ಪ್ರಶ್ನೆಯೇ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.
ಇಲ್ಲಿನ ಸದಾಶಿವನಗರದ ತಮ್ಮ ನಿವಾಸದಲ್ಲಿ ಮಾತನಾಡಿದ ಅವರು, ಈ ಪ್ರಕರಣದಲ್ಲಿ ಸಚಿವರ ರಾಜೀನಾಮೆ ಕೇಳುವುದು ವಿಪಕ್ಷಗಳ ಧರ್ಮ, ಅವರು ಕೇಳುತ್ತಾರೆ. ನಾವು ಈ ಪ್ರಕರಣದ ಬಗ್ಗೆ ಪರಿಶೀಲಿಸುತ್ತಿದ್ದೇವೆ. ಮುಖ್ಯಮಂತ್ರಿಗಳು ಸಹ ಗಂಭೀರವಾಗಿ ಪರಿಗಣಿಸಿದ್ದಾರೆ. ಸತ್ಯಾಸತ್ಯತೆ ಪರಿಶೀಲಿಸುತ್ತೇವೆ. ಆಧಾರವಿಲ್ಲದೇ ಆರೋಪ ಮಾಡಿದ ಮಾತ್ರಕ್ಕೆ ನಾವು ಪ್ರತಿಕ್ರಿಯೆ ನೀಡಲು ಆಗುವುದಿಲ್ಲ. ತಪ್ಪು ಯಾರೇ ಮಾಡಿದರೂ ತಪ್ಪೇ. ತಕ್ಷಣವೇ ಎಫ್‌ಐಆರ್ ದಾಖಲಿಸಿ, ವ್ಯವಸ್ಥಾಪಕ ನಿರ್ದೇಶಕರ ಅಮಾನತು ಮಾಡಲಾಗಿದೆ. ತಪ್ಪು ಮಾಡಿರುವುದು ಸಾಬೀತಾದರೆ ಮುಲಾಜಿಲ್ಲದೇ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.
ಗುತ್ತಿಗೆದಾರರ ಸಂತೋಷ್ ಪಾಟೀಲ್ ಪ್ರಕರಣದಲ್ಲಿ ಅಂದಿನ ಸಚಿವ ಕೆ.ಎಸ್.ಈಶ್ವರಪ್ಪನವರ ರಾಜೀನಾಮೆ ವಿಚಾರದ ಪ್ರತಿಕ್ರಿಯಿಸಿದ ಶಿವಕುಮಾರ್, ಆತ್ಮಹತ್ಯೆ ಪತ್ರದಲ್ಲಿ ಸಚಿವರ ಮೌಖಿಕ ಆದೇಶವಿದೆ ಎಂದು ಅಧಿಕಾರಿಗಳು ಹೇಳಿದ್ದರು ಎಂದು ಉಲ್ಲೇಖಿಸಲಾಗಿದೆ. ಸಚಿವ ನಾಗೇಂದ್ರ ಅವರ ವಿರುದ್ಧ ನೇರ ಆರೋಪವಿಲ್ಲ. ಈ ವಿಚಾರವಾಗಿ ಸರ್ಕಾರ ತನಿಖೆ ಮಾಡಲಿದೆ. ಇದು ಸಣ್ಣ ವಿಚಾರವಲ್ಲ. 10 ಲಕ್ಷ ಅಕ್ರಮ ನಡೆದರೂ ಅಕ್ರಮವೇ. ನಾನು ಪ್ರಕರಣದ ಎಫ್‌ಐಆರ್ ಓದಿದ್ದೇನೆ. ಸಚಿವರನ್ನು ಕರೆಸಿ ಮಾಹಿತಿ ಪಡೆಯುತ್ತೇವೆ. ಅವರಿಗೆ ಸಮನ್ಸ್ ಕೊಡುತ್ತೇವೆ. ಸತ್ಯಾಸತ್ಯತೆ ಪರಿಶೀಲಿಸುತ್ತೇವೆ ಎಂದು ಹೇಳಿದರು.
65 ಸಂಭಾವ್ಯರ ಪಟ್ಟಿ ಸಿದ್ಧ: ಇದೇ ವೇಳೆ, ವಿಧಾನ ಪರಿಷತ್ ಚುನಾವಣೆಗೆ ನಮ್ಮ ಪಕ್ಷದಲ್ಲಿ 300ಕ್ಕೂ ಹೆಚ್ಚು ಆಕಾಂಕ್ಷಿಗಳಿದ್ದಾರೆ. ದೆಹಲಿ ನಾಯಕರೊಂದಿಗೆ ಚರ್ಚೆ ಮಾಡಿ ಎಲ್ಲ ವರ್ಗದ 65 ಸಂಭಾವ್ಯರ ಪಟ್ಟಿಯನ್ನು ಕೊಟ್ಟು ಬಂದಿದ್ದೇವೆ. ಉಳಿದಂತೆ ಹೈಕಮಾಂಡ್ ನಾಯಕರು ಅಂತಿಮ ತೀರ್ಮಾನ ಮಾಡಲಿದ್ದಾರೆ ಎಂದು ಡಿಸಿಎಂ ಮಾಹಿತಿ ನೀಡಿದರು.

ಮಾಜಿ ಶಾಸಕ ಯತೀಂದ್ರ ಅವರ ವಿಚಾರವಾಗಿ ಹೈಕಮಾಂಡ್ ನಾಯಕರು ಈಗಲೇ ಮಾತು ಕೊಟ್ಟಿದ್ದರು. ಕೇವಲ ಬೆಂಗಳೂರು ಮಾತ್ರವಲ್ಲದೇ ಕರಾವಳಿ ಕರ್ನಾಟಕ, ಮಧ್ಯ ಕರ್ನಾಟಕ, ಕಲ್ಯಾಣ ಕರ್ನಾಟಕ ಸೇರಿದಂತೆ ಎಲ್ಲ ವಲಯಗಳಿಂದಲೂ ಟಿಕೆಟ್ ಆಕಾಂಕ್ಷಿಗಳಿದ್ದಾರೆ. ಮಂಗಳೂರಿನಲ್ಲಿ 21, ಚಿಕ್ಕಮಗಳೂರಿನಲ್ಲಿ 9 ಮಂದಿ ಆಕಾಂಕ್ಷಿಗಳಿದ್ದಾರೆ. ಪಕ್ಷ ಸಂಘಟನೆಗೆ ಆದ್ಯತೆ ನೀಡಲಾಗುವುದು. ಅನೇಕ ಪ್ರಮುಖರು, ಹಿರಿಯರು ಹಾಗೂ ಚುನಾವಣೆಯಲ್ಲಿ ಸೋತವರು, ವಿಧಾನಸಭೆ ಟಿಕೆಟ್ ತ್ಯಾಗ ಮಾಡಿರುವವರು ಟಿಕೆಟ್ ಕೇಳಿದ್ದು, ಹೈಕಮಾಂಡ್ ನಾಯಕರು ಅಂತಿಮ ತೀರ್ಮಾನ ಮಾಡಲಿದ್ದಾರೆ ಎಂದರು. ಸಚಿವ ಬೋಸರಾಜು ಮುಂದುವರಿಯುತ್ತಾರಾ ಎಂಬ ಪ್ರಶ್ನೆಗೆ ಡಿಕೆಶಿ, ಈ ವಿಚಾರವಾಗಿಯೂ ಹೈಕಮಾಂಡ್ ನಾಯಕರು ತೀರ್ಮಾನ ಮಾಡುತ್ತಾರೆ ಎಂದಷ್ಟೇ ಹೇಳಿದರು.
ಜೂ.2ರಂದು ಶಾಸಕಾಂಗ ಪಕ್ಷದ ಸಭೆ: ಜೂನ್ 2ರಂದು ಸಂಜೆ 6 ಗಂಟೆಗೆ ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಶಾಸಕಾಂಗ ಪಕ್ಷದ ಸಭೆ ಇದೆ. ಪರಿಷತ್ ಸದಸ್ಯರು, ಶಾಸಕರು ಹಾಗೂ ಸಂಸದರಿಗೆ ಆಹ್ವಾನ ನೀಡಲಾಗುವುದು. ಪರಿಷತ್ ಚುನಾವಣೆ ಸೇರಿದಂತೆ ಪಕ್ಷದ ಕೆಲವು ವಿಚಾರ ಚರ್ಚೆ ಮಾಡಲಾಗುವುದು. ಜೂನ್ 1ರಂದು ಕರೆಯಲಾಗಿದ್ದ ಪಕ್ಷದ ಪದಾಧಿಕಾರಿಗಳ ಸಭೆಯನ್ನು ಮುಂದೂಡಲಾಗಿದೆ ಎಂದು ತಿಳಿಸಿದರು.
ಕೆಪಿಸಿಸಿ ಅಧ್ಯಕ್ಷ ಗಾದಿಗೆ ಸುರೇಶ್ ಅವರನ್ನು ಆಯ್ಕೆ ಮಾಡಲಾಗುತ್ತದೆ ಎಂಬುದು ಶುದ್ಧ ಸುಳ್ಳು. ಮೊದಲು ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಮುಗಿಯಲಿ. ನಾನು ಅಧಿಕಾರ ಬಿಡುವ ವೇಳೆಗೆ ಒಂದು ಹಂತಕ್ಕೆ ತಂದು ನಿಲ್ಲಿಸಬೇಕು. ರೇಸ್ ಕೋರ್ಸ್ ರಸ್ತೆಯ ಕಾಂಗ್ರೆಸ್ ಭವನ ಕಟ್ಟಡ ದುರ್ಬಲವಾಗುತ್ತಿದ್ದು, ಹೊಸ ಕಟ್ಟಡ ನಿರ್ಮಾಣ ಮಾಡಬೇಕಿದೆ ಎಂದರು.
ಅಂಚೆ ಕಚೇರಿಯಲ್ಲಿ ಮಹಿಳೆಯರು ಖಾತೆ ತೆರೆಯಲು ಮುಂದಾಗುತ್ತಿರುವ ಬಗ್ಗೆ ಕೇಳಿದಾಗ ಪ್ರಶ್ನೆಗೆ, ನಮ್ಮ ಗ್ಯಾರಂಟಿ ಯೋಜನೆಗಳ ಬಗ್ಗೆ ಜನರಲ್ಲಿ ಅಷ್ಟೊಂದು ವಿಶ್ವಾಸ ಮೂಡುತ್ತಿದೆ. 'ಇಂಡಿಯಾ' ಒಕ್ಕೂಟ ಅಧಿಕಾರಕ್ಕೆ ಬರಲಿದೆ. ನಾವು ಅಧಿಕಾರಕ್ಕೆ ಬಂದರೆ ಮಹಿಳೆಯರಿಗೆ 1 ಲಕ್ಷ ನೀಡಲಾಗುವುದು ಎಂದು ನಮ್ಮ ನಾಯಕರು ಹಾಗೂ ಮಿತ್ರ ಪಕ್ಷಗಳ ನಾಯಕರು ಹೇಳಿದ್ದಾರೆ ಎಂದರು.

SPORT CORNER

ವಿರಾಟ್ ಕೊಹ್ಲಿ ಟೀಕಿಸಿದ ನ್ಯೂಜಿಲ್ಯಾಂಡ್ ಮಾಜಿ ಆಟಗಾರನಿಗೆ ಕೊಲೆ ಬೆದರಿಕೆ!

ಬೆಂಗಳೂರು: ವಿರಾಟ್ ಕೊಹ್ಲಿ ವಿಶ್ವದ ಅತ್ಯಂತ ಪ್ರಸಿದ್ಧ ಕ್ರಿಕೆಟಿಗರಲ್ಲಿ ಒಬ್ಬರು. ಅವರಿಗೆ ಕೋಟ್ಯಂತರ ಅಭಿಮಾನಿಗಳು ಇದ್ದಾರೆ. ಹೀಗಾಗಿ ವಿರಾಟ್ ಕೊಹ್ಲಿಯ ಬಗ್ಗೆ ಟೀಕೆ ಟಿಪ್ಪಣಿಗಳನ್ನು ಮಾಡುವಾಗ ಎಚ್ಚರಿಕೆಯಿಂದ ಇರುವುದು ಮುಖ್ಯವಾಗುತ್ತದೆ. ಆದಾಗ್ಯೂ ಅವರನ್ನು ಹೊಗಳಿದರೆ ಸಿಕ್ಕಾಪಟ್ಟೆ ಪ್ರೀತಿ ಸಿಗುವುದು ಖಾತರಿ. ಹಲವಾರು ಬಾರಿ ನೋಡಿದಂತೆ ವಿರಾಟ್ ಕೊಹ್ಲಿಯ ಅಭಿಮಾನಿ ಬಳಗವು ಆಗಾಗ್ಗೆ ಅವರನ್ನು ಟೀಕಿಸಿರುವವರ ನಿದ್ದೆಗೆಡಿಸಿದ್ದಾರೆ. ಇದೀಗ ಕೊಹ್ಲಿಯ ಅಭಿಮಾನಿಗಳಿಗೆ ಹೆದರಿದವರು ನ್ಯೂಜಿಲ್ಯಾಂಡ್ ಮಾಜಿ ಆಟಗಾರ ಸೈಮನ್ ಡೌಲ್‌ಐ. ಪಿಎಲ್ 2024 ರ ಋತುವಿನಲ್ಲಿ ವಿರಾಟ್ ಕೊಹ್ಲಿ ಅವರ ಸ್ಟ್ರೈಕ್ ರೇಟ್ ಬಗ್ಗೆ ಅವರು ಹೇಳಿಕೆ ನೀಡಿದ್ದರು. ಅಲ್ಲಿಂದ ಅವರಿಗೆ ಕೊಹ್ಲಿ ಅಭಿಮಾನಿಗಳು ಸರಿಯಾಗಿ ನಿದ್ದೆ ಮಾಡಲೂ ಬಿಟ್ಟಿಲ್ಲ. ನ್ಯೂಜಿಲೆಂಡ್ ನ ಮಾಜಿ ಕ್ರಿಕೆಟಿಗನಿಗೆ ಕೊಲೆ ಬೆದರಿಕೆಗಳನ್ನೂ ಹಾಕಿದ್ದಾರೆ.
ಕ್ರಿಕೆಟ್ ಬಜ್ ನಲ್ಲಿ ದಿನೇಶ್ ಕಾರ್ತಿಕ್ ಅವರೊಂದಿಗಿನ ಇತ್ತೀಚಿನ ಮಾತುಕತೆ ವೇಳೆ ಡೌಲ್ ತಮಗಾದ ಕಹಿ ಅನುಭವವನ್ನು ಹಂಚಿಕೊಂಡಿದ್ದಾರೆ. ಬಲಗೈ ಬ್ಯಾಟರ್ ಕೊಹ್ಲಿ ಬಗ್ಗೆ ಹಲವಾರು ಒಳ್ಳೆಯ ವಿಷಯಗಳನ್ನು ಹೇಳಿದ್ದರೂ, ಅವರ ಒಂದು ನಕಾರಾತ್ಮಕ ಹೇಳಿಕೆಯ ಪರಿಣಾಮವಾಗಿ ತಮ್ಮ ಜೀವಕ್ಕೆ ಬೆದರಿಕೆ ಬಂದಿತ್ತು ಎಂದು ಬಹಿರಂಗಪಡಿಸಿದರು.
ವಿರಾಟ್ ಕೊಹ್ಲಿ ತುಂಬಾ ಒಳ್ಳೆಯ ಆಟಗಾರ. ಅದು ಯಾವಾಗಲೂ ಅವರ ಸ್ಟ್ರೈಕ್‌ರೇಟ್ ಸುತ್ತ ನನ್ನ ವಿಚಾರಗಳು ಇದ್ದವು. ನಾನು ವಿರಾಟ್ ಕೊಹ್ಲಿ ಬಗ್ಗೆ ಸಾವಿರ ಉತ್ತಮ ವಿಷಯಗಳನ್ನು ಹೇಳಿದ್ದೇನೆ. ಆದರೆ ನಾನು ಸ್ಟ್ರೈಕ್ ರೇಟ್ ಬಗ್ಗೆ ಮಾತನಾಡಿದೆ. ಅದು ಸ್ವಲ್ಪ ನಕಾರಾತ್ಮಕವಾಗಿರಬಹುದು ಅಥವಾ ನಕಾರಾತ್ಮಕವಾಗಿದ್ದವು. ಅದಕ್ಕಾಗಿ ನನಗೆ ಕೊಲೆ ಬೆದರಿಕೆಗಳು ಬಂದವು ಎಂದು ಹೇಳಿದ್ದಾರೆ.
ವಿದೇಶಿ ಆಟಗಾರರ ಟೀಕೆ
ಕೊಹ್ಲಿಯ ಸ್ಟ್ರೈಕ್ ರೇಟ್ ಬಗ್ಗೆ ಟೀಕೆ ಸೈಮನ್ ಡೌಲ್ ಅವರದ್ದೇ ಮೊದಲಲ್ಲ. ಹಲವಾರು ಭಾರತೀಯ ಕ್ರಿಕೆಟ್ ದೈತ್ಯದು ಅವರ ಸ್ಟ್ರೈಕ್ ರೇಟ್ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ಹೇಳಿದ್ದಾರೆ. ಪಂದ್ಯದ ನಂತರದ ಸಂದರ್ಶನದಲ್ಲಿ, ವಿರಾಟ್ ಕೊಹ್ಲಿ ತಮ್ಮ ಟೀಕೆಗಳಿಗೆ ಉತ್ತರಿಸಿದ್ದರು. ಅದು ತಮ್ಮ ಆದ್ಯತೆ ಎಂದು ಹೇಳಿದ್ದರು. ಎಲ್ಲರೂ ನನ್ನ ಸ್ಟ್ರೈಕ್ ರೇಟ್ ಬಗ್ಗೆ ಎಲ್ಲರೂ ಮಾತನಾಡುತ್ತಿದ್ದಾರೆ. ನಾನು ಸ್ಪಿನ್ ಬೌಲಿಂಗ್‌ಗೆ ಸರಿಯಾಗಿ ಆಡದಿರುವ ಬಗ್ಗೆ (ಅಂಕಿಅಂಶಗಳು) ಮಾತನಾಡುತ್ತಾರೆ. ಆದರೆ ನನಗೆ ನನ್ನ ಕೆಲಸವನ್ನು ಮಾಡುವ ಬಗ್ಗೆ ಮಾತ್ರ ಯೋಚನೆಯಿದೆ. ಅವರು ಏನು ಬೇಕಾದರೂ ಮಾತನಾಡಬಹುದು. ಇದು ಈಗ ನನಗೆ ಒಂದು ರೀತಿಯ ಸ್ಮರಣೆಯಾಗಿದೆ ಎಂದು ಹೇಳಿದ್ದರು.

ಕೊಹ್ಲಿ ಈ ಋತುವಿನಲ್ಲಿ 15 ಇನಿಂಗ್ಸ್ ಗಳಿಂದ 154.70 ಸ್ಟ್ರೈಕ್ ರೇಟ್ ನಲ್ಲಿ 741 ರನ್ ಗಳಿಸಿದ್ದ ದ್ದರು. ಅದಕ್ಕಾಗಿ ಅವರು ಆರೆಂಜ್ ಕ್ಯಾಪ್ ಪಡೆದಿದ್ದರು. ಪಂದ್ಯಾವಳಿಯ ಅವಧಿಯಲ್ಲಿ ಅವರು ಐದು ಅರ್ಧಶತಕಗಳೊಂದಿಗೆ 1 ಶತಕವನ್ನು ಬಾರಿಸಿದ್ದರು.

Printed by: K.S.Sunil Kumar # 143, Karigowda Extn., Hassan-573201. Karnataka. Published by : K.S.Sunil Kumar, # 143, Karigowda Extn., Hasan-573201. Karnataka. Published by : K.S.Sunil Kumar, Printed at 'Pappas Print House' MG Road, Opp. Dist Stadium, Hassan-573201